ಕನ್ನಡಪ್ರಭ
ಗುರುವಾರ 7.05.2026

ಗರಿಷ್ಠ 35°c | ಕನಿಷ್ಠ 24°c

ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ: ಅರ್ಜಿ ಆಹ್ವಾನ

ಚಿತ್ರದುರ್ಗ: ಜಿಲ್ಲಾ ವೀರಶೈವ ಲಿಂಗಾಯತ ಹೇಮರಡ್ಡಿ ಮಲ್ಲಮ್ಮ ಸಮಾಜದಿಂದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಮ್ಮಿಕೊಳ್ಳಲಾಗಿದೆ. 2025-26ನೇ ಸಾಲಿನಲ್ಲಿ 10ನೇ ತರಗತಿ ಹಾಗೂ ದ್ವಿತೀಯ ಪಿಯುಸಿ ಯಲ್ಲಿ ಶೇ.90 ಅಥವಾ 90ಕ್ಕಿಂತ ಹೆಚ್ಚಿನ ಅಂಕಗಳನ್ನು ಪಡೆದಿರುವ ಜಿಲ್ಲೆಯ ವೀರಶೈವ ರಡ್ಡಿ ಲಿಂಗಾಯಿತ ಸಮಾಜದ ವಿದ್ಯಾರ್ಥಿಗಳು ಅಂಕಪಟ್ಟಿ, ಆಧಾರ್‌ಕಾರ್ಡ್, ವರ್ಗಾವಣೆ ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರ, ಮೊಬೈಲ್ ಸಂಖ್ಯೆ ಹಾಗೂ ಇತ್ತೀಚಿನ ಎರಡು ಪಾಸ್‌ಪೋರ್ಟ್ ಗಾತ್ರದ ಫೋಟೋಗಳನ್ನು ಮೇ 13ರ ಸಂಜೆ 5 ಗಂಟೆಯೊಳಗಾಗಿ ಚಿತ್ರದುರ್ಗ ಜಿಲ್ಲಾ ವೀರಶೈವ ಲಿಂಗಾಯತ ಹೇಮರಡ್ಡಿ ಮಲ್ಲಮ್ಮ ಸಮಾಜ(ರಿ) ಮೊದಲನೇ ಮಹಡಿ, ಸಿಟಿ ಕ್ಲಬ್ ಬಿಲ್ಡಿಂಗ್, ರೋಟರಿ ಶಾಲೆ ಪಕ್ಕ, ಚಿತ್ರದುರ್ಗ ಇಲ್ಲಿಗೆ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ವೀರಶೈವ ಲಿಂಗಾಯತ ಹೇಮರಡ್ಡಿ ಮಲ್ಲಮ್ಮ ಸಮಾಜದ ಪ್ರಧಾನ ಕಾರ್ಯದರ್ಶಿ ಡಿ.ಟಿ.ಶಿವಾನಂದಪ್ಪ, ಸಹ ಕಾರ್ಯದರ್ಶಿ ಜಿ.ನಾಗಭೂಷಣ್ ಇವರುಗಳು ಕೋರಿದ್ದಾರೆ. ಮಾಹಿತಿಗಾಗಿ ಮೊ: 9448423229, 9591812105 ಸಂಖ್ಯೆಗಳಿಗೆ ಸಂಪರ್ಕಿಸಿ.



ಚಿತ್ರದುರ್ಗ ಜಿಲ್ಲಾ ಜಾಗತಿಕ ಲಿಂಗಾಯತ ಮಹಾಸಭಾ ಮಹಿಳಾ ಘಟಕದಿಂದ ನೀಲಕಂಠೇಶ್ವರ ಸಭಾಭವನದಲ್ಲಿ ವಿಶ್ವಗುರು ಬಸವಣ್ಣ ಹಾಗೂ ಜಗನ್ಮಾತೆ ಅಕ್ಕ ಮಹಾದೇವಿ ಜಯಂತಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕೆ.ಎಂ.ವೀರೇಶ್, ನಿವೃತ್ತ ಉಪನ್ಯಾಸಕ ಬಿ.ಟಿ.ನಂದೀಶ್, ಜಯಶೀಲ ಬಾಬು, ಜಯಶೀಲ ವೀರಣ್ಣ, ಹೇಮಲತಾ ಮಂಜುನಾಥ್, ಶೋಭಾ ಮಲ್ಲಿಕಾರ್ಜುನ್, ಬಸವರಾಜ್, ಗೀತಾ ರುದ್ರೇಶ್, ವಿಶಾಲ ನಂದೀಶ್, ದೇವಕಿ ರುದ್ರೇಶ್, ನಾಗಲಾಂಬಿಕ, ಲಲಿತ ಹಿರೇಮಠ ಇದ್ದರು.

ಸುದ್ದಿ ಸಿಂಚನ

ಪ್ರತಿಭಾ ಪುರಸ್ಕಾರಕ್ಕಾಗಿ ಅರ್ಜಿ ಆಹ್ವಾನ

ಹೊಸದುರ್ಗ: ಶ್ರೀಮದ್ ಜಗದ್ಗುರು ರೇವಣಸಿದ್ದೇಶ್ವರ ಸಿಂಹಾಸನ ಶ್ರೀ ಕಾಗಿನೆಲೆ ಮಹಾಸಂಸ್ಥಾನ ಕನಕ ಗುರುಪೀಠ ಹೊಸದುರ್ಗ ಶಾಖಾ ಮಠದ ವತಿಯಿಂದ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಕುರುಬ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ರಾಜ್ಯಮಟ್ಟದಲ್ಲಿ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲು ಅರ್ಜಿ ಆಹ್ವಾನಿಸಲಾಗಿದೆ. 2025-26ನೇ ಸಾಲಿನ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕ ಪಡೆದಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ವಿದ್ಯಾರ್ಥಿಗಳು ತಾವು ಪಡೆದ ಅಂಕಪಟ್ಟಿ ಹಾಗೂ ವರ್ಗಾವಣೆ ಪತ್ರ ಇವುಗಳ ಜೆರಾಕ್ಸ್ ಪ್ರತಿಯನ್ನು ತಮ್ಮ ಪೂರ್ಣ ವಿಳಾಸ ಮತ್ತು ಫೋನ್ ನಂಬರ್ ಅನ್ನು ಅಂಚೆ ಮೂಲಕ ಶ್ರೀಮದ್ ಜಗದ್ಗುರು ರೇವಣಸಿದ್ದೇಶ್ವರ ಸಿಂಹಾಸನ ಶ್ರೀ ಕಾಗಿನೆಲೆ ಮಹಾಸಂಸ್ಥಾನ ಕನಕಗುರುಪೀಠ ಶಾಖಾಮಠ ಬೆಂಗಳೂರು ಕನಕ ಭವನ 10ನೇ ಅಡ್ಡರಸ್ತೆ ಚಂದ್ರಾ ಲೇಔಟ್ 1ನೇ ಹಂತ ಬೆಂಗಳೂರು-560072 ಇಲ್ಲಿಗೆ ಜುಲೈ 12ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕೇಶವ 9902697976, ವೇದಮೂರ್ತಿ ಒಡೆಯರ್ 7349069190 ಇವರನ್ನು ಸಂಪರ್ಕಿಸಲು ತಿಳಿಸಲಾಗಿದೆ.

ಅಂಗಾರಕ ಸಂಕಷ್ಟಹರ ಚತುರ್ಥಿ ವಿಶೇಷ ಪೂಜೆ



ಹಿರಿಯೂರು: ನಗರದ ಚಿಕ್ಕಪೇಟೆಯಲ್ಲಿರುವ ಗಣಪತಿ ದೇವಾಲಯದಲ್ಲಿ ಮಂಗಳವಾರ ವಿಶೇಷ ಅಂಗಾರಕ ಸಂಕಷ್ಟಹರ ಚತುರ್ಥಿಯ ಪ್ರಯುಕ್ತ ವಿಶೇಷ ಪೂಜಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ವಿಶೇಷ ಪೂಜೆಯ ಅಂಗವಾಗಿ ಗಣಪತಿಗೆ ಅರ್ಚನೆ, ಅಭಿಷೇಕ, ಹೂವಿನ ಅಲಂಕಾರ, ಕಡುಬು ಅಲಂಕಾರ, ಕಥಾಶ್ರವಣ, ಮಹಾಮಂಗಳಾರತಿ ನಂತರ ಭಕ್ತಾದಿಗಳಿಗೆ ತೀರ್ಥ ಪ್ರಸಾದ ವಿನಿಯೋಗ ನಡೆಯಿತು. ನಗರದ ಅನೇಕ ಭಕ್ತರು ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

10ರಂದು ಹೇಮರಡ್ಡಿ ಮಲ್ಲಮ್ಮ ಜಯಂತಿ

ಚಿತ್ರದುರ್ಗ: ನಗರದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ಶ್ರೀ ಮುರುಗಿಯ ಶಾಂತವೀರ ಮುರುಘರಾಜೇಂದ್ರ ಮಹಾಸ್ವಾಮಿಗಳ ಲೀಲಾ ವಿಶ್ರಾಂತಿ ತಾಣದ ಆವರಣದಲ್ಲಿ ಮೇ 10ರ ಭಾನುವಾರ ಬೆಳಗ್ಗೆ 8.30 ಗಂಟೆಗೆ ಮಹಾಸಾಧ್ವಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮನವರ ಜಯಂತಿ (ಶರಣೋತ್ಸವ) ಹಮ್ಮಿಕೊಳ್ಳಲಾಗಿದೆ. ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠ ಹಾಗೂ ವಿದ್ಯಾಪೀಠದ ಆಡಳಿತ ಮಂಡಳಿಯ ಅಧ್ಯಕ್ಷ ಶಿವಯೋಗಿ ಸಿ.ಕಳಸದ್ ಅಧ್ಯಕ್ಷತೆ ವಹಿಸಲಿದ್ದು, ಆಡಳಿತ ಮಂಡಳಿಯ ಸದಸ್ಯ ಡಾ.ಬಸವಕುಮಾರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸುವರು. ವಿಶ್ರಾಂತ ಉಪನ್ಯಾಸಕಿ ಸಿ.ಬಿ.ಶೈಲಾ ಜಯಕುಮಾರ್ ವಿಷಯಾವಲೋಕನಮಾಡಲಿದ್ದು, ಚಿತ್ರದುರ್ಗ ವೀರಶೈವ ಲಿಂಗಾಯತ ಹೇಮರಡ್ಡಿ ಮಲ್ಲಮ್ಮ ಸಮಾಜದ ಅಧ್ಯಕ್ಷ ಡಾ.ಎಲ್.ಪಾಲಾಕ್ಷಯ್ಯ, ಗೌರವಾಧ್ಯಕ್ಷ ಜಿ. ಚಿದಾನಂದಪ್ಪ, ಉಪಾಧ್ಯಕ್ಷ ಎನ್.ಬಿ. ವಿಶ್ವನಾಥ್, ಕಾರ್ಯದರ್ಶಿ ಡಿ.ಟಿ ಶಿವಾನಂದಪ್ಪ ಮತ್ತು ವಿವಿಧ ಸಮಾಜದ ಬಂಧುಗಳು ಹಾಗೂ ಪದಾಧಿಕಾರಿಗಳು ಉಪಸ್ಥಿತರಿರುವರು.

ಗುರುತಿನ ಚೀಟಿ ಪಡೆಯಲು ಸೂಚನೆ

ಚಿತ್ರದುರ್ಗ: ನಗರದ ರಂಗಯ್ಯನಬಾಗಿಲು ಬಳಿಯ ಜಿಲ್ಲಾ ಯಾದವ (ಗೊಲ್ಲ)ರ ಸಂಘ ಚುನಾವಣೆಯು ಮೇ 17ರಂದು ನಡೆಯಲಿದ್ದು ಚಿತ್ರದುರ್ಗ ನಗರದ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯಲ್ಲಿ ಮತದಾನಕ್ಕೆ ಅವಕಾಶ ಕಲ್ಪಿಸಲಾಗಿದೆ. ಈ ಸಂಬಂಧ ಗುರುತಿನ ಚೀಟಿಯನ್ನು ಸಂಘದ ಕಚೇರಿಯಲ್ಲಿ ಮೇ 7ರಿಂದ 16ರವರೆಗೆ ಬೆಳಗ್ಗೆ 11ರಿಂದ ಸಂಜೆ 5.30ರವರೆಗೆ ವಿತರಿಸಲಾಗುವುದು. ಗುರುತಿನ ಚೀಟಿಗಾಗಿ ತಮ್ಮ ಇತ್ತೀಚಿನ ಎರಡು ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ ಹಾಗೂ ಆಧಾರ್ ಕಾರ್ಡ್ ಜೆರಾಕ್ಸನ್ ಆಗಮಿಸಿ, ಗುರುತಿನ ಚೀಟಿ ಪಡೆಯುವಂತೆ ಜಿಲ್ಲಾ ಯಾದವ (ಗೊಲ್ಲ)ರ ಸಂಘದ ಆಡಳಿತಾಧಿಕಾರಿ ಹಾಗೂ ಉಪವಿಭಾಗಾಧಿಕಾರಿ ಡಾ.ಕೆ.ಜೆ.ಕಾಂತರಾಜ್ ಕೋರಿದ್ದಾರೆ.

ಕೃಷಿಕ ಸಮಾಜ ಸಭೇಲಿ ಶೈಕ್ಷಣಿಕ ಅವ್ಯವಸ್ಥೆ ಮಾರ್ದನಿ

ಅನಧಿಕೃತ ಶಾಲೆಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮಕ್ಕೆ ಮಹೇಶ್ವರಪ್ಪ ಸೂಚನೆ | ಸರ್ಕಾರಿ ಶಾಲೆಗಳ ಆಸ್ತಿ ಸಂರಕ್ಷಣೆ ಅಗತ್ಯ

• **ಕನ್ನಡಪ್ರಭ ವಾರ್ತೆ** ಚಿತ್ರದುರ್ಗ

ಕೃಷಿಕ ಸಮಾಜ ಎಂದಾಕ್ಷಣ ರಸಗೊಬ್ಬರ, ಬಿತ್ತನೆ ಬೀಜದ ಬಗ್ಗೆ ಚರ್ಚೆ ಮಾಡಬೇಕೆಂದೇನೂ ಇಲ್ಲ. ಶಾಲೆಗಳಲ್ಲಿ ಓದುವ ಗ್ರಾಮೀಣ ಮಕ್ಕಳು ಕೃಷಿಕ ಸಮಾಜಕ್ಕೆ ಸೇರಿಲ್ಲವಾ. ಶೈಕ್ಷಣಿಕ ಸಮಸ್ಯೆ ಮುಂದಿಟ್ಟುಕೊಂಡು ಗಂಭೀರ ಚರ್ಚೆಗೆ ಬುಧವಾರ ನಡೆದ ಜಿಲ್ಲಾ ಕೃಷಿಕ ಸಮಾಜದ ಸಭೆ ಸಾಕ್ಷಿಯಾಗಿತ್ತು.

ನಗರದ ಜಂಟಿ ಕೃಷಿ ನಿರ್ದೇಶಕರ ಕಚೇರಿಯ ಸಭಾಂಗಣದಲ್ಲಿ ನಡೆದ ಜಿಲ್ಲಾ ಕೃಷಿಕ ಸಮಾಜದ ಕಾರ್ಯಕಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅಧ್ಯಕ್ಷ ಎನ್.ಆರ್.ಮಹೇಶ್ವರಪ್ಪ, ಜಿಲ್ಲೆಯಲ್ಲಿ ಶಿಕ್ಷಣ ಇಲಾಖೆಯ ನಿಯಮಗಳನ್ನು ಗಾಳಿಗೆ ತೂರಿ ನಡೆಯುತ್ತಿರುವ ಅನಧಿಕೃತ ಶಾಲೆಗಳ ವಿರುದ್ಧ ಕೂಡಲೇ ಕಾನೂನು ಕ್ರಮ ಜರುಗಿಸಬೇಕು ಎಂದು ಶಿಕ್ಷಣ ಇಲಾಖೆ ಅಧಿಕಾರಿಗೆ ಸೂಚನೆ ನೀಡಿದರು.

ಅನೇಕ ಶಾಲೆಗಳು ರಾಜ್ಯ ಪಠ್ಯಕ್ರಮದ ಅನುಮತಿ ಪಡೆದು, ಸಿಬಿಎಸ್‌ಇ ಅಥವಾ ಐಸಿಎಸ್‌ಇ ಎಂದು ಪ್ರಚಾರ ಮಾಡುತ್ತಿವೆ. ಇದು ಪೋಷಕರಿಗೆ ಮಾಡುವ ವಂಚನೆಯಾಗಿದೆ. ಶೈಕ್ಷಣಿಕ ವರ್ಷದ ಪ್ರವೇಶಾತಿ ಪ್ರಕ್ರಿಯೆ ಆರಂಭವಾಗುವ ಮುನ್ನವೇ ಆಯಾ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು ಅನಧಿಕೃತ ಶಾಲೆಗಳ ಪಟ್ಟಿಯನ್ನು ಬಹಿರಂಗಪಡಿಸಬೇಕು ಎಂದರು.



ಚಿತ್ರದುರ್ಗದ ಜಂಟಿ ಕೃಷಿ ನಿರ್ದೇಶಕರ ಸಭಾಂಗಣದಲ್ಲಿ ಬುಧವಾರ ನಡೆದ ಜಿಲ್ಲಾ ಕೃಷಿಕ ಸಮಾಜದ ಸಭೆಯಲ್ಲಿ ಕೃಷಿಕ ಸಮಾಜದ ಅಧ್ಯಕ್ಷ ಮಹೇಶ್ವರಪ್ಪ ಮಾತನಾಡಿದರು.

ಶಾಲೆ ನಡೆಸಲು ಇರಬೇಕಾದ ಕನಿಷ್ಟ ಜಮೀನು, ಕಟ್ಟಡದ ಸುರಕ್ಷತೆ ಮತ್ತು ಇತರೆ ನಿಯಮಗಳ ಪಾಲಿಸದ ಶಾಲೆಗಳ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಬೇಕು. ಕೆಲವು ಶಾಲೆಗಳು ಒಂದೇ ಆವರಣದಲ್ಲಿ ವಿವಿಧ ಪಠ್ಯಕ್ರಮಗಳನ್ನು ನಡೆಸುತ್ತ ನಿಯಮಗಳನ್ನು ಉಲ್ಲಂಘಿಸುತ್ತಿವೆ. ಇಂತಹ ಶಾಲೆಗಳ ಪಟ್ಟಿಯನ್ನು ಪತ್ರಿಕೆಗಳ ಮೂಲಕ ಪ್ರಕಟಿಸಬೇಕು ಎಂದರು.

ಶಾಲಾಜಾಗವನ್ನು ಒತ್ತುವರಿಮಾಡಿಕೊಳ್ಳುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರಿ ಶಾಲೆಗಳ ಆಸ್ತಿ ಸಂರಕ್ಷಣೆಗಾಗಿ ಅಗತ್ಯ ಕ್ರಮವಹಿಸಬೇಕು ಎಂದು ಜಿಲ್ಲಾ ಕೃಷಿಕ ಸಮಾಜದ ಖಜಾಂಚಿ ಭಕ್ತ ಪ್ರಹ್ಲಾದ್ ಸಲಹೆ ನೀಡಿದರು.

ಸರ್ಕಾರಿ ಶಾಲೆಗಳಿಗೆ ಈ ಹಿಂದೆ ಅನೇಕರು ಭೂದಾನ ಮಾಡಿರುತ್ತಾರೆ. ಈ ನಿಟ್ಟಿನಲ್ಲಿ ಶಾಲೆಯ ದಾಖಲೆಗಳನ್ನು ಕ್ರಮಬದ್ಧಗೊಳಿಸಿ ನೋಂದಣಿ ಮಾಡಿಸಬೇಕು. ಈ ಕುರಿತು ಶಿಕ್ಷಣ ಇಲಾಖೆ ಸಮಗ್ರ ಸುತ್ತೋಲೆ ತಂದು ದಾಖಲಾತಿ ಸಂರಕ್ಷಣೆಗೆ ಮಾಡುವುದು ಒಳಿತು. ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಕರ್ನಾಟಕ ಪಬ್ಲಿಕ್ ಶಾಲೆಗಳ (ಕೆಪಿಎಸ್) ಸಂಖ್ಯೆಯನ್ನು ಹೆಚ್ಚಿಸಬೇಕು ಎಂದು ಸಲಹೆ ನೀಡಿದರು. ಜಿಲ್ಲೆಯಲ್ಲಿ ಎ.27ರಿಂದ ಕಾಲು ಬಾಯಿ ರೋಗದ ಲಸಿಕಾ ಅಭಿಯಾನ ಆರಂಭವಾಗಿದ್ದು, ಈಗಾಗಲೇ 90,000 ಜಾನುವಾರುಗಳಿಗೆ ಲಸಿಕೆ ನೀಡಲಾಗಿದೆ ಎಂದು ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ಉಪ ನಿರ್ದೇಶಕ ಡಾ.ಕುಮಾರ್‌ಸಭೆಗೆ ಮಾಹಿತಿ ನೀಡಿದರು.ಈ ಬಾರಿ ಲಸಿಕೆ ನೀಡಿದ ತಕ್ಷಣವೇ ಜಾನುವಾರುಗಳಿಗೆ 'ಇನಾಫ್' ತಂತ್ರಾಂಶ ದಡಿ 12 ಅಂಕಿಯ ಆಧಾರ್‌ಸಂಖ್ಯೆಯ ಟ್ಯಾಗ್ ಅಳವಡಿಸಿ ನೋಂದಾಯಿಸಲಾಗುತ್ತಿದೆ. ಇದರಿಂದ ಲಸಿಕೆ ಪಡೆದ ಜಾನುವಾರುಗಳ ನಿಖರ ಮಾಹಿತಿ ಲಭ್ಯವಾಗಲಿದ್ದು, ನಕಲಿ ದಾಖಲಾತಿಗೆ ಅವಕಾಶವಿರುವುದಿಲ್ಲ ಎಂದರು.

ಜಾನುವಾರುಗಳು ಮೃತಪಟ್ಟರೆ ನೀಡಲಾಗುತ್ತಿದ್ದ ವಿಮಾ ಪರಿಹಾರದ ಮೊತ್ತವನ್ನು ಹೆಚ್ಚಿಸಲಾಗಿದ್ದು, ದನ ಅಥವಾ ಎತ್ತುಗಳಿಗೆ 15,000 ರು. ಹಾಗೂ ಕುರಿ-ಮೇಕೆಗಳಿಗೆ ಅವುಗಳ ವಯಸ್ಸಿಗೆ ಅನುಗುಣವಾಗಿ 5,000 ದಿಂದ 7,000 ರು. ವರೆಗೆ ಪರಿಹಾರ ನೀಡಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲೆಯ 3,238 ಹೆಕ್ಟೇರ್‌ಪ್ರದೇಶದಲ್ಲಿ ರೇಷ್ಮೆ ಬೆಳೆಯಲಾಗುತ್ತಿದ್ದು, ಒಟ್ಟು 3,830 ರೇಷ್ಮೆ ಬೆಳೆಗಾರರು ಜಿಲ್ಲೆಯಲ್ಲಿದ್ದಾರೆ. ಕಳೆದ ಮಾರ್ಚ್‌ನಲ್ಲಿ 18 ಲಕ್ಷ ಚಾಕಿ ವಿತರಿಸಲಾಗಿದ್ದು, 1,500 ಮೆಟ್ರಿಕ್ ಟನ್ ರೇಷ್ಮೆ ಉತ್ಪಾದನೆಯ ಗುರಿ ತಲುಪಲಾಗಿದೆ. ರೈತರಿಗೆ ರೇಷ್ಮೆ ಕೃಷಿ ಸುಲಭಗೊಳಿಸಲು ಇಲಾಖೆ ಕಳೆದ ವರ್ಷದಿಂದ ಹಲವಾರು ನೆರವು ನೀಡಿದೆ. ಜಿಲ್ಲೆಯಾದ್ಯಂತ 35 ರೇಷ್ಮೆ ಹುಳು ಸಾಕಾಣಿಕೆ ಮನೆಗಳಿಗೆ ಸಹಾಯಧನ ನೀಡಲಾಗಿದ್ದು, ಕಡಿಮೆ ವೆಚ್ಚದಲ್ಲಿ ಕೃಷಿ ಮಾಡಲು ಬಯಸುವವರಿಗಾಗಿ 10 ಗರಿ ಶೆಡ್‌ಗಳನ್ನು ನಿರ್ಮಿಸಿಕೊಡಲಾಗಿದೆ. 150 ಹೆಕ್ಟೇರ್‌ರೇಷ್ಮೆಪ್ರದೇಶಕ್ಕೆ ಹನಿನೀರಾವರಿ ಅಳವಡಿಸಲು ಆರ್ಥಿಕ ನೆರವು ಒದಗಿಸಲಾಗಿದೆ. ರೇಷ್ಮೆ ಬೆಳೆಗಾರರಿಗೆ ಅನುಕೂಲವಾಗುವಂತೆ ಸೌರದೀಪ ವಿತರಿಸಲಾಗುತ್ತಿದೆ. ಹಿರಿಯೂರು ತಾಲೂಕಿನಲ್ಲಿ 600 ಹೆಕ್ಟೇರ್, ಚಳ್ಳಕೆರೆ 400 ಹೆಕ್ಟೇರ್, ಚಿತ್ರದುರ್ಗ 350 ಹೆಕ್ಟೇರ್, ಹೊಸದುರ್ಗ 320 ಹೆಕ್ಟೇರ್, ಮೊಳಕಾಲ್ಮೂರು 300 ಹೆಕ್ಟೇರ್ ಹಾಗೂ ಹೊಳಲ್ಕೆರೆ 120 ಹೆಕ್ಟೇರ್ ಪ್ರದೇಶವನ್ನು ರೇಷ್ಮೆ ಕೃಷಿ ಹೊಂದಿದೆ ಎಂದು ರೇಷ್ಮೆ ಇಲಾಖೆ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಮಿಥುನ್ ಕುಮಾರ್, ಜಿಲ್ಲಾ ಕೃಷಿಕ ಸಮಾಜದ ಸದಸ್ಯರಾದ ಭಕ್ತ ಪ್ರಹ್ಲಾದ್, ಚಂದ್ರಶೇಖರಪ್ಪ, ಶಿವಲಿಂಗಪ್ಪ, ಪರಮೇಶ್ವರಪ್ಪ, ಧರಣೇಶ್, ಕಾಂತರಾಜು, ರಮೇಶಪ್ಪ, ರಾಗಿ ಶಿವಮೂರ್ತಪ್ಪ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

ಕಸಾಪ ಕನ್ನಡಿಗರ ಹೆಮ್ಮೆಯ ಸಂಸ್ಥೆ

ಕಸಾಪ ಸಂಸ್ಥಾಪನಾ ದಿನಾಚರಣೆಯಲ್ಲಿ ಸಾಹಿತಿ ಚಂದ್ರಶೇಖರ್ ತಾಳ್ಯ

• **ಕನ್ನಡಪ್ರಭ ವಾರ್ತೆ** ಹೊಳಲ್ಕೆರೆ

ಕನ್ನಡ ಸಾಹಿತ್ಯ ಪರಿಷತ್ತು ಕನ್ನಡಿಗರ ಹೆಮ್ಮೆಯ ಸಂಸ್ಥೆ. 112 ವರ್ಷಕ್ಕೂ ಹೆಚ್ಚು ಕಾಲ ಕನ್ನಡದ ಸೇವೆ ಮಾಡುತ್ತಿರುವ ಈ ಪರಿಷತ್ತು ಭಾಷೆಯ ಶ್ರೀಮಂತಿಕೆಯನ್ನು ಇಂದಿನ ಪೀಳಿಗೆಗೆ ದಾಟಿಸುವಲ್ಲಿ ಯಶಸ್ವಿಯಾಗಿ ಜನಸಾಮಾನ್ಯರ ಕೊಂಡಿಯಾಗಿ ಕೆಲಸ ಮಾಡುತ್ತಿದೆ ಎಂದು ಹಿರಿಯ ಸಾಹಿತಿ ಚಿಂತಕರಾದ ಚಂದ್ರಶೇಖರ್ ತಾಳ್ಯ ನುಡಿದರು.

ಚಿತ್ರದುರ್ಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಹೊಳಲ್ಕೆರೆ ತಾಲೂಕು ಘಟಕದವತಿಯಿಂದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಚಿತ್ರಹಳ್ಳಿಯಲ್ಲಿ ಆಯೋಜಿಸಿದ್ದ 112ನೇ ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ ವನ್ನು ಉದ್ಘಾಟಿಸಿ ಮಾತನಾಡಿದರು.

ಕನ್ನಡವೂ ನಮ್ಮ ಬದುಕಿನ ಭಾಗ. ನಮ್ಮ ಆಲೋಚನೆ, ಸಂಸ್ಕಾರ, ಸಂಸ್ಕೃತಿ, ಜೀವನಶೈಲಿ ಬದುಕು, ಬರಹ, ಎಲ್ಲೆಡೆಯೂ ಕನ್ನಡವಿದೆ. ಕನ್ನಡ ನಮ್ಮ ಅಸ್ಮಿತೆ. ಕನ್ನಡ ಸಾಹಿತ್ಯ ಪರಿಷತ್ತಿಗೆ ಭವ್ಯವಾದ ಇತಿಹಾಸವಿದ್ದು. ಕನ್ನಡ ಭಾಷೆ ಸಾಹಿತ್ಯ ಸಂಸ್ಕೃತಿ ಇತಿಹಾಸ ಮತ್ತು ಕಲೆಗೆ ಪ್ರೋತ್ಸಾಹಿಸುತ್ತಿದೆ. ಅಂದು ಮೈಸೂರಿನ ಮಹಾರಾಜರಾಗಿದ್ದ ರಾಜಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್‌ಚಿಂತನೆಯ ಮೇರೆಗೆ ಕಲೆ, ಸಾಹಿತ್ಯಕ್ಕೆ ಪ್ರೋತ್ಸಾಹ ನೀಡಿ ಒಂದು ದಿವಾನರಾಗಿದ್ದ ಸರ್ ಎಂ.ವಿಶ್ವೇಶ್ವರಯ್ಯ, ಮಾರ್ಗದರ್ಶನದಲ್ಲಿ ಸಂಸ್ಥಾಪಕ ಅಧ್ಯಕ್ಷರಾದ ಎಚ್. ವಿ. ನಂಜುಂಡಯ್ಯನವರ ನೇತೃತ್ವದಲ್ಲಿ ಹತ್ತಾರು ಮಹನೀಯರ ಕಲ್ಪನೆ ಮತ್ತು ಆಶಯಗಳನ್ನು ಎಲ್ಲಾ ಕನ್ನಡಿಗರಿಗೂ ತಲುಪಲಿ ಎಂಬ ಸಹಕಾರದೊಂದಿಗೆ ಅಸ್ತಿತ್ವಕ್ಕೆ ತರಲಾಯಿತು ಎಂದರು.



ಚಿತ್ರಹಳ್ಳಿಯಲ್ಲಿ ಆಯೋಜಿಸಿದ್ದ 112ನೇ ಕಸಾಪ ಸಂಸ್ಥಾಪನಾ ದಿನಾಚರಣೆಯನ್ನು ಸಾಹಿತಿ ಚಂದ್ರಶೇಖರ್‌ತಾಳ್ಯ ಉದ್ಘಾಟಿಸಿದರು. ಮುಖಂಡರು ಉಪಸ್ಥಿತರಿದ್ದರು.

'ಕನ್ನಡ ಮನಸ್ಸುಗಳ ಮೇಲೆ ಕಸಾಪ ಬೀರಿದ ಪ್ರಭಾವ ಎಂಬ ವಿಷಯ ಬಗ್ಗೆ ಜಿಲ್ಲಾ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಕನ್ನಡ ಭಾಷಾ ಪರಿವೀಕ್ಷಕರಾದ ರಂಗ ನಾಯ್ಕ್ ಮಾತನಾಡುತ್ತಾ, ಕಸಾಪ ಸಂಸ್ಥಾಪಕರ ಬಗ್ಗೆ ಹಾಗೂ ಕನ್ನಡ ಸಾಹಿತ್ಯ ಪರಿಷತ್ತು ನಡೆದು ಬಂದ ದಾರಿಯನ್ನು ಕುರಿತು ಇತಿಹಾಸ ಭಾಷೆಗೆ ನೀಡಿದ ಕೊಡುಗೆಗಳ ಬಗ್ಗೆ ವಿವರಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ.ಮೋಹನ್ ಮಾತನಾಡಿ, ಕಸಾಪ ಅನೇಕ ದತ್ತಿಗಳನ್ನು ಸ್ಥಾಪನೆ ಮಾಡಿದೆ. ನೂರಾರು ಸಾಧಕರನ್ನು ಗುರುತಿಸಿ ಸನ್ಮಾನಿಸಿದೆ. ಭಾಷೆ ಇತಿಹಾಸದ ಬಗ್ಗೆ ಪುಸ್ತಕಗಳನ್ನು ಪ್ರಕಟಿಸಿದೆ. ನಿಘಂಟುಗಳನ್ನು ಮುದ್ರಿಸಿದೆ. ಜನಸಾಮಾನ್ಯರ ಮನೆ ಬಾಗಿಲಿಗೆ ಸಾಹಿತ್ಯವನ್ನು ತಲುಪಿಸುವ ಕೆಲಸ ಆಗಬೇಕು ಎಂದರು.

ಪದವಿವಿದ್ಯಾರ್ಥಿಗಳಿಗೆ ಸಂಸ್ಥಾಪನಾ ದಿನಾಚರಣೆ ಅಂಗವಾಗಿ ಕನ್ನಡ ನಾಡು ನುಡಿ ಮತ್ತು ಸಂಸ್ಕೃತಿ ಪ್ರಬಂಧ ಸ್ಪರ್ಧೆ ಆಯೋಜಿಸಿ ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಅಭಿನಂದನಾ ಪತ್ರ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಉಪನ್ಯಾಸಕರಾದ ಮಂಜುನಾಥ ನಾಯ್ಕ, ಗೌರವ ಕಾರ್ಯದರ್ಶಿ ಬಿ.ಜೆ.ಹಳ್ಳಿವೆಂಕಟೇಶ್, ಸಂಘಟನಾ ಕಾರ್ಯದರ್ಶಿ, ಪಾವಗಡ ಶಿವಣ್ಣ, ನಿವೃತ್ತ ನೌಕರ ಸಂಘದ ಖಜಾಂಚಿ ಮಲ್ಲೇಶಪ್ಪ, ಅಧ್ಯಾಪಕರಾದ ಮಹಾಂತೇಶ, ಲಾವಣ್ಯ, ಸದಾಶಿವ ಡಿ.ಒ.ಪವಿತ್ರ ಎಂ.ಡಿ.ಶ್ರೀನಿವಾಸ, ಜೆ.ಲಾವಣ್ಯ, ಶೀಲಾ, ಶಿಲ್ಪ, ಬಿ.ಎಂ.ನಳಿನಾಕ್ಷಿ, ಬೋಧಕ ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

ಮನುಷ್ಯರು ಮುಕ್ತಿ ಪಡೆಯುವ ರುದ್ರಭೂಮಿಗೆ ಸೌಕರ್ಯ ಕಲ್ಪಿಸಲು ಸಿದ್ಧ: ಶಾಸಕ ವೀರೇಂದ್ರ ಪಪ್ಪಿ

• **ಕನ್ನಡಪ್ರಭ ವಾರ್ತೆ** ಚಿತ್ರದುರ್ಗ

ಊರಿಗೊಂದು ರುದ್ರಭೂಮಿ ಇರಲೇಬೇಕೆನ್ನುವುದು ರಾಜ್ಯ ಸರ್ಕಾರದ ನಿಯಮವಾಗಿದೆ ಅದರಂತೆ ನಗರದ ರುದ್ರಭೂಮಿಗೆ ಬೇಕಾಗಿರುವಂತ ಮೂಲ ಭೂತ ಸೌಕರ್ಯಗಳನ್ನು ಒದಗಿಸುವ ಕೆಲಸವನ್ನು ಪ್ರಾಮಾಣಿಕವಾಗಿ ಮಾಡುತ್ತಿದ್ದೇನೆ ಎಂದು ಶಾಸಕ ಕೆ.ಸಿ ವೀರೇಂದ್ರ ಹೇಳಿದರು.

ನಗರದ ಜಟ್ ಪಟ್ ನಗರದ ಸಮೀಪವಿರುವ ವೀರಶೈವ ಹಿಂದೂ ರುದ್ರಭೂಮಿಗೆ ಬುಧವಾರ ಸಮಾಜದ ಪ್ರಮುಖ ಮುಖಂಡರೊಂದಿಗೆ ಭೇಟಿ ನೀಡಿ ಅಲ್ಲಿನ ಮೂಲಭೂತ ಸೌಲಭ್ಯಗಳ ಕೊರತೆ ಹಾಗೂ ಅಭಿವೃದ್ಧಿ ಅಗತ್ಯಗಳ ಕುರಿತು ಸಮಗ್ರ ಪರಿಶೀಲನೆ ನಡೆಸಿ ಮಾತನಾಡಿದರು.

ಮಾನವ ಕುಲದಲ್ಲಿ ಆಸ್ತಿ ಅಂತಸ್ತು ಮಾಡಿ ನಾ ಮುಂದು ತಾ ಮುಂದು ಎಂದು ಬದುಕುವ ಸಮಾಜದಲ್ಲಿ ಎಷ್ಟೇ ಅಸ್ತಿ ಹಣಗಳಿಸಿದರೂ ಕೊನೆಗೆ ಮುಕ್ತಿ ಪಡೆಯುವುದು ರುದ್ರಭೂಮಿಯಲ್ಲಿ ಇಂತಹ ರುದ್ರಭೂಮಿಗೆ ಮೂಲಭೂತ ಸೌಕರ್ಯ ಕಲ್ಪಿಸಲು ಸಿದ್ಧನಿದ್ದೇನೆ. ಅಗತ್ಯವಾಗಿ ಬೇಕಿರುವಂತಹ ಸೌಕರ್ಯಗಳನ್ನು ಅಧಿಕಾರಿಗಳ ಜೊತೆ ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.

ರುದ್ರಭೂಮಿ ಎಂಬುದು ಸಮಾಜದ ಎಲ್ಲ ವರ್ಗದ ಜನರಿಗೆ ಅತ್ಯಂತ ಸಂವೇದನಾಶೀಲವಾದ ಸ್ಥಳವಾಗಿದ್ದು, ಶವ ಸಾಗಣೆಗೆ ಸುಗಮ ರಸ್ತೆ, ಮಳೆಗಾಲದಲ್ಲಿ ನೀರು ನಿಂತುಕೊಳ್ಳದ ವ್ಯವಸ್ಥೆ, ಬೆಳಕು ಸೌಲಭ್ಯ ಹಾಗೂ ಭದ್ರತಾ ಗೋಡೆ ತ್ವರಿತ ಗತಿಯಲ್ಲಿ ಮಾಡಲಾಗುತ್ತದೆ. ಇದಕ್ಕೆ ಸಮಾಜದ ಮುಖಂಡರು, ಸಾರ್ವಜನಿಕರ ಸಹಕಾರ ನೀಡಿದರೆ ಮಾತ್ರ ರುದ್ರಭೂಮಿಯ ಸಮಗ್ರ ಅಭಿವೃದ್ಧಿ ಸಾಧ್ಯವಾಗುತ್ತದೆ ಎಂದರು.



ಚಿತ್ರದುರ್ಗ ನಗರದ ಜಟ್ ಪಟ್ ನಗರದ ಸಮೀಪವಿರುವ ವೀರಶೈವ ಹಿಂದೂ ರುದ್ರಭೂಮಿಗೆ ಶಾಸಕ ಪಪ್ಪಿ ಭೇಟಿ ನೀಡಿ ಅಗತ್ಯಗಳ ಕುರಿತು ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ನಗರಸಭೆ ಪೌರಾಯುಕ್ತೆ ಲಕ್ಷ್ಮಿ, ವೀರಶೈವ ಮುಖಂಡರಾದ ಷಣ್ಮುಖಪ್ಪ, ನಾಗರಾಜ್, ಸಂತೋಷ್, ಮಂಜುನಾಥ್, ತಿಪ್ಪೇಶ್, ದ್ವಾರಕೇಶ್ ರಮೇಶ್ ನಾಗರಾಜ್ ಹಾಗು ಇತರರು ಇದ್ದರು.

ಮನುಷ್ಯನಿಗೆ ಹೃದಯ ಎಷ್ಟು ಮುಖ್ಯವೋ ಕಣ್ಣು ಅಷ್ಟೇ ಮುಖ್ಯ

ನೇತ್ರದಾನ ಶಿಬಿರ ಉದ್ಘಾಟಿಸಿ ಶಾಸಕ ಪಪ್ಪಿ ಹೇಳಿಕೆ



ಚಿತ್ರದುರ್ಗದಲ್ಲಿ ನೇತ್ರದಾನ ಶಿಬಿರವನ್ನು ಶಾಸಕ ಕೆ.ಸಿ ವೀರೇಂದ್ರ ಪಪ್ಪಿ ಉದ್ಘಾಟಿಸಿ ಮಾತನಾಡಿದರು. ಗ್ಯಾರಂಟಿ ಸಮಿತಿ ಜಿಲ್ಲಾಧ್ಯಕ್ಷ ಶಿವಣ್ಣ, ಆರ್.ಕೆ ಸರ್ದಾರ್ ಇದ್ದರು.

ಚಿತ್ರದುರ್ಗ: ಮನುಷ್ಯನಿಗೆ ಹೃದಯ ಎಷ್ಟು ಮುಖ್ಯವೋ ಕಣ್ಣು ಕೂಡ ಅಷ್ಟೇ ಮುಖ್ಯ. ಸಣ್ಣಪುಟ್ಟ ದೋಷಗಳು ಕಂಡಲ್ಲಿ ಉಚಿತ ನೇತ್ರಚಿಕಿತ್ಸಾ ಶಿಬಿರಗಳಲ್ಲಿ ಭಾಗವಹಿಸಿ ಚಿಕಿತ್ಸೆಯನ್ನು ಪಡೆಯಿರಿ ಎಂದು ಶಾಸಕ ಕೆ.ಸಿ ವೀರೇಂದ್ರ ಪಪ್ಪಿ ತಿಳಿಸಿದರು.

ನಗರದ 19ನೇ ವಾರ್ಡಿನ ಬುಧವಾರ ಲಿಟ್ಲ್ ಏಂಜಲ್ ನರ್ಸರಿ ಸ್ಕೂಲ್ ಮತ್ತು ಇಂಗ್ಲಿಷ್ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ನೇತ್ರದಾನ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಚಿತ್ರದುರ್ಗ ವಿಧಾನಸಭಾ ಕ್ಷೇತ್ರದ ಬಹುತೇಕ ಹಳ್ಳಿಗಳಲ್ಲಿ ಈ ಶಿಬಿರವನ್ನು ಆಯೋಜನೆ ಮಾಡಿದ್ದು, ಕ್ಷೇತ್ರದ ಮತದಾರರು ಕಣ್ಣಿನ ಸಮಸ್ಯೆಯಿಂದ ವಂಚಿತರಾಗಬಾರದು ಎನ್ನುವ ನಿಟ್ಟಿನಲ್ಲಿ ಶಂಕರ್ ಕಣ್ಣಿನ ಆಸ್ಪತ್ರೆಯ ಸಹಯೋಗದೊಂದಿಗೆ ನಿರಂತರವಾಗಿ ಕಣ್ಣಿನ ಸಮಸ್ಯೆ ಇರುವಂತವರಿಗೆ ಉಚಿತವಾಗಿ ಸೇವೆಯನ್ನು ನೀಡಲಾಗುತ್ತದೆ ಎಂದರು.

ಈಗಾಗಲೇ ಕ್ಷೇತ್ರದ ಬಹುತೇಕ ಹಳ್ಳಿಗಳಲ್ಲಿ ಶಿಬಿರವನ್ನು ನಡೆಸಿ 3 ಸಾವಿರಕ್ಕೂ ಹೆಚ್ಚು ಜನರಿಗೆ ಕಣ್ಣಿನ ಶಸ್ತ್ರಚಿಕಿತ್ಸೆ ನಡೆಸಲಾಗಿದೆ, 7 ಸಾವಿರ ಜನರಿಗೆ ಕಣ್ಣಿನ ಕನ್ನಡಕವನ್ನು ವಿತರಿಸಲಾಗಿದೆ, ಯಾವುದೇ ಜನರಿಂದಲೂ ಸಹ ಹಣವನ್ನು ತೆಗೆದುಕೊಳ್ಳದೆ ಉಚಿತ ವಾಗಿ ಕೆಲಸವನ್ನು ನಮ್ಮ ಮಾವನವರಾದ ದೊಡ್ಡಣ್ಣ ಅವರ ನೇತೃತ್ವದಲ್ಲಿ ನಡೆಯುತ್ತಿದೆ ಎಂದರು.

ಕಾಂಗ್ರೆಸ್ ಮುಖಂಡ ಅಂಜಿನಪ್ಪ ಕೆಳಗೋಟೆ ಮಾತನಾಡಿ, ಉಚಿತ ಆರೋಗ್ಯ ಶಿಬಿರಗಳು ಎಂದು ಯಾರು ಸಹ ನಿರ್ಲಕ್ಷ್ಯ ವಹಿಸದೆ, ಇತಂಹ ಶಿಬಿರಗಳಲ್ಲಿ ಪ್ರತಿಯೊಬ್ಬರು ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳುವುದು ಅಗತ್ಯವಾಗಿದೆ. ವೃದ್ಧರು, ಮಕ್ಕಳು, ಮಹಿಳೆಯರು ಯಾರೇ ಕಣ್ಣಿನ ಸಮಸ್ಯೆ ಇದ್ದಲ್ಲಿ ಪ್ರತಿ ವಾರವು ಸಹ ಕಣ್ಣಿನ ತಪಾಸಣೆಯನ್ನು ಮಾಡಲಾಗುತ್ತದೆ ಎಂದರು. ಜಿಲ್ಲಾ ಗ್ಯಾರಂಟಿ ಸಮಿತಿ ಜಿಲ್ಲಾಧ್ಯಕ್ಷ ಶಿವಣ್ಣ, ಕಾಂಗ್ರೆಸ್ ಮುಖಂಡರಾದ ಆರ್.ಕೆ ಸರ್ದಾರ್, ವಾಸಿಮ್, ರೆಹಮಾನ್ ಜಲೀಲ್ ಇದ್ದರು.

ಹೊಸ ಬೆಳಕು | ಡಾ.ಪಿ.ಬಿ.ಭರತ್ ಅಭಿಮತ | ಅಂತರ ಕಾಲೇಜು ವಿದ್ಯುತ್ಸೋತ್ಸವ-2026 ಕಾರ್ಯಕ್ರಮ ಉದ್ಘಾಟನೆ

ವಿದ್ಯಾರ್ಥಿಗಳ ಸೃಜನಶೀಲತೆ, ಪರಿಶ್ರಮದಲ್ಲಿ ದೇಶದ ಭವಿಷ್ಯ

• **ಕನ್ನಡಪ್ರಭ ವಾರ್ತೆ** ಚಿತ್ರದುರ್ಗ

ವಿದ್ಯಾರ್ಥಿಗಳಲ್ಲಿರುವ ಸೃಜನಶೀಲತೆ ಮತ್ತು ಪರಿಶ್ರಮ ದೇಶದ ಭವಿಷ್ಯವನ್ನು ರೂಪಿಸಲಿದೆ ಎಂದು ಸಂಸ್ಥೆಯ ಪ್ರಾಂಶುಪಾಲ ಡಾ.ಪಿ.ಬಿ.ಭರತ್ ಹೇಳಿದರು.

ನಗರದ ಎಸ್‌ಜೆಎಂ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ವಿಭಾಗದ ವತಿಯಿಂದ ಒಂದು ದಿನದ ಅಂತರ ಕಾಲೇಜು ವಿದ್ಯುತ್ಸೋತ್ಸವ-2026 ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ತಂತ್ರಜ್ಞಾನವು ಇಂದು ನಮ್ಮ ಜೀವನದ ಅವಿಭಾಜ್ಯ ಅಂಗವಾಗಿದೆ. ವಿಶೇಷವಾಗಿ ವಿದ್ಯುತ್ ತಂತ್ರಜ್ಞಾನ ಕ್ಷೇತ್ರವು ಮಾನವ ಜೀವನವನ್ನು ಸುಲಭಗೊಳಿಸುವಲ್ಲಿ ಮಹತ್ತರ ಪಾತ್ರ ವಹಿಸಿದೆ. ಬೆಳಕಿನಿಂದ ಹಿಡಿದು ಸಂವಹನದವರೆಗೆ, ಕೈಗಾರಿಕೆಗಳಿಂದ ಹಿಡಿದು ಡಿಜಿಟಲ್ ಯುಗದವರೆಗೆ ವಿದ್ಯುತ್ ತಂತ್ರ ಜ್ಞಾನದ ಪ್ರಭಾವ ಕಾಣಬಹುದು ಎಂದರು.



ಚಿತ್ರದುರ್ಗ ನಗರದ ಎಸ್.ಜೆ.ಎಂ.ತಾಂತ್ರಿಕ ಮಹಾವಿದ್ಯಾಲಯದಲ್ಲಿ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ವಿಭಾಗದ ವತಿಯಿಂದ ಒಂದು ದಿನದ ಅಂತರ ಕಾಲೇಜು ವಿದ್ಯುತ್ಸೋತ್ಸವ- 2026 ಕಾರ್ಯಕ್ರಮವನ್ನು ಸಂಸ್ಥೆಯ ಪ್ರಾಂಶುಪಾಲ ಡಾ.ಪಿ.ಬಿ.ಭರತ್ ಉದ್ಘಾಟಿಸಿದರು.

ಈ ತಾಂತ್ರಿಕ ಉತ್ಸವವು ಕೇವಲ ಸ್ಪರ್ಧೆಗಳ ವೇದಿಕೆಯಲ್ಲ, ನಿಮ್ಮ ಪ್ರತಿಭೆ, ಸೃಜನಶೀಲತೆ ಮತ್ತು ನವೀನ ಚಿಂತನೆಗಳನ್ನು ಪ್ರದರ್ಶಿಸುವ ಅದ್ಭುತ ಅವಕಾಶವಾಗಿದೆ. ರಾಜ್ಯದ ವಿವಿಧ ಎಂಜಿನಿಯರಿಂಗ್ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳಿಂದ ಆಗಮಿಸಿದ ವಿದ್ಯಾರ್ಥಿಗಳು ತಮ್ಮ ಜ್ಞಾನ ಮತ್ತು ಕೌಶಲ್ಯಗಳನ್ನು ಹಂಚಿಕೊಳ್ಳುವುದರ ಮೂಲಕ ಪರಸ್ಪರ ಕಲಿಕೆ ಮತ್ತು ಅಭಿವೃದ್ಧಿಗೆ ಸಹಕಾರಿಯಾಗುತ್ತದೆ ಎಂದರು.

ದಾವಣಗೆರೆ ಜಿ.ಎಂ.ವಿಶ್ವವಿದ್ಯಾಲಯದ ಎಲೆಕ್ಟ್ರಿಕಲ್ ವಿಭಾಗದ ಮುಖ್ಯಸ್ಥ ಡಾ.ಮರುಳಸಿದ್ದಪ್ಪ ಎಚ್.ಬಿ.ಮಾತನಾಡಿ, ನಮ್ಮ ದಿನನಿತ್ಯದ ಜೀವನದಲ್ಲಿ ವಿದ್ಯುತ್ ಇಲ್ಲದೆ ಏನೂ ಸಾಧ್ಯವಿಲ್ಲ. ಇಂಧನ ಉತ್ಪಾದನೆ, ಪ್ರಸರಣ, ನವೀಕರಿಸಬಹುದಾದ ಶಕ್ತಿ, ಸ್ಮಾರ್ಟ್ ಗ್ರಿಡ್ ತಂತ್ರಜ್ಞಾನ, ಇವೆಲ್ಲವೂ ದೇಶದ ಅಭಿವೃದ್ಧಿಗೆ ಪ್ರಮುಖವಾಗಿವೆ. ಇಂತಹ ತಾಂತ್ರಿಕ ಉತ್ಸವಗಳು ವಿದ್ಯಾರ್ಥಿಗಳಿಗೆ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಮತ್ತು ನವೀನ ಆಲೋಚನೆಗಳನ್ನು ಹಂಚಿಕೊಳ್ಳಲು ಅತ್ಯುತ್ತಮ ವೇದಿಕೆಯಾಗಿವೆ ಎಂದರು.

ನಮ್ಮ ದೇಶವು ಇಂದು ಶಕ್ತಿ ಕ್ಷೇತ್ರದಲ್ಲಿ ದೊಡ್ಡ ಪರಿವರ್ತನೆಯನ್ನು ಕಾಣುತ್ತಿದೆ. ಸೌರಶಕ್ತಿ, ಗಾಳಿ ಶಕ್ತಿ ಮತ್ತು ವಿದ್ಯುತ್ ವಾಹನಗಳ ಅಭಿವೃದ್ಧಿ ಇವುಗಳಲ್ಲಿ ಯುವ ಎಂಜಿನಿಯರ್‌ಗಳ ಪಾತ್ರ ಅತ್ಯಂತ ಮುಖ್ಯವಾಗಿದೆ. ನಿಮ್ಮಂತಹ ವಿದ್ಯಾರ್ಥಿಗಳಿಂದಲೇ ನಾಳೆಯ ಭಾರತವು ಇನ್ನಷ್ಟು ಶಕ್ತಿಶಾಲಿಯಾಗಲಿದೆ. ಗೆಲುವಿಗಿಂತ ಕಲಿಕೆ ಮುಖ್ಯ ಎಂಬುದನ್ನು ಮರೆಯಬೇಡಿ ಎಂದರು.

ಎಲೆಕ್ಟ್ರಿಕಲ್ ವಿಭಾಗದ ಮುಖ್ಯಸ್ಥ ಡಾ.ಬಿ.ಜಿ.ಕುಮಾರಸ್ವಾಮಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಐಕ್ಯೂಎಸಿ ಸಂಚಾಲಕ ಡಾ.ಎ.ಎಂ.ರಾಜೇಶ್, ಡೀನ್ ಅಕಾಡೆಮಿಕ್ ಡಾ.ಚೇತನ್.ಎಸ್, ಕಾರ್ಯಕ್ರಮದ ಸಂಚಾ ಲಕ ಡಾ.ಎಸ್.ಸಿ.ಮಂಜುನಾಥ್, ಸಂಯೋಜಕರಾದ ಪ್ರೊ.ಸುಧಾ.ಟಿ, ಪ್ರೊ.ನೂರ್‌ಫಾತಿಮ, ಪ್ರೊ.ಸುಶ್ಮಿತಾದೇಬ್, ವಿದ್ಯಾರ್ಥಿ ಸಂಯೋಜಕರಾದ ಕಾವ್ಯ, ಚಂದನ್, ಭರತ್, ವೆಂಕಟೇಶ್, ಚಂದನ, ವಿಭಾಗದ ಬೋದಕ ಮತ್ತು ಬೋದಕೇತರ ಸಿಬ್ಬಂದಿಯವರು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಾದ ತೇಜಸ್ವಿನಿ ಪ್ರಾರ್ಥಿಸಿ, ಬಿಬಿಹಜಿರಾ ಸ್ವಾಗತಿಸಿ, ಕೇಸರ್‌ಮಲನ್ ನಿರೂಪಿಸಿ ವಂದಿಸಿದರು.

ಸುದ್ದಿ ಸಿಂಚನ

9ರಂದು ಆರೋಗ್ಯ ಶಿಬಿರ

ಹಿರಿಯೂರು: ನಗರದ ವಾಸವಿ ವಿದ್ಯಾವರ್ಧಕ ಸಂಘ, ರೋಟರಿ ಕ್ಲಬ್, ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಹಾಗೂ ಹಿರಿಯೂರು ಲಯನ್ಸ್ ಕ್ಲಬ್ ಇಂಟರ್ ನ್ಯಾಷನಲ್, ರಾಣಿಬೆನ್ನೂರು ಲಕ್ಷ್ಮಿ ಸರ್ಜಿಕಲ್ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಹಾಗೂ ಲಕ್ಷ್ಮಿ ಆರೋಗ್ಯ ಮತ್ತು ಶಿಕ್ಷಣ ಸಮಗ್ರ ಅಭಿವೃದ್ಧಿ ಸೇವಾ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ಮೊಣಕಾಲು ಮಂಡಿ ಚಿಪ್ಪು ಚಿಕಿತ್ಸೆ ಮತ್ತು ಆಪರೇಷನ್‌ಗಾಗಿ ಉಚಿತ ಆರೋಗ್ಯ ಶಿಬಿರವನ್ನು ಲಕ್ಕವ್ವನಹಳ್ಳಿ ರಸ್ತೆಯ ವಾಗ್ದೇವಿ ವಿದ್ಯಾಸಂಸ್ಥೆ ಆವರಣದಲ್ಲಿ ಮೇ 9ರಂದು ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ಏರ್ಪಡಿಸಲಾಗಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು. ಶಿಬಿರದಲ್ಲಿ ಪಾಲ್ಗೊಳ್ಳುವವರು ಯಶಸ್ವಿನಿ ಕಾರ್ಡ್, ಆಧಾರ್‌ಕಾರ್ಡ್‌ಗಳನ್ನು ತಮ್ಮ ಜೊತೆ ತರಬೇಕು. ಯಶಸ್ವಿನಿ ಕಾರ್ಡ್ ಇರುವವರಿಗೆ ಮೊದಲ ಆದ್ಯತೆ ನೀಡಲಾಗುವುದು ಎಂದು ಲಯನ್ಸ್ ಚಾರಿ ಟೇಬಲ್ ಟ್ರಸ್ಟ್ ಅಧ್ಯಕ್ಷ ಕೆ.ವಿ.ಅಮರೇಶ್ ತಿಳಿಸಿದ್ದಾರೆ.

ಡಾ.ಎಂ.ಎನ್ ಶ್ರೀಪತಿ ನಿಧನ



ಹಿರಿಯೂರು: ನಗರದ ಖ್ಯಾತ ಕೀಲು ಮೂಳೆ ತಜ್ಞರು, ನಿವೃತ್ತ ಜಿಲ್ಲಾ ಆರೋಗ್ಯಾಧಿಕಾರಿಗಳು, ಹಿರಿಯೂರು ತಾಲೂಕು ವೈದ್ಯರ ಸಂಘದ ಸ್ಥಾಪಕ ಅಧ್ಯಕ್ಷರು ಆಗಿದ್ದ ಡಾ.ಎಂ.ಎನ್ ಶ್ರೀಪತಿಯವರು(86) ಬುಧವಾರ ಬೆಳಿಗ್ಗೆ 2-55 ರ ಸುಮಾರಿಗೆ ನಿಧನ ಹೊಂದಿದ್ದಾರೆ.ಮೃತರು ಪುತ್ರ ಸೇರಿದಂತೆ ಅಪಾರ ಅಭಿಮಾನಿಗಳನ್ನು, ಬಂಧು ಮಿತ್ರರನ್ನು ಅಗಲಿದ್ದಾರೆ. ಅಂತ್ಯಕ್ರಿಯೆಯನ್ನು ಬುಧವಾರ ಮಧ್ಯಾಹ್ನ 3:30ರ ಸುಮಾರಿಗೆ ಮೃತರ ವಿವಿ ಪುರದ ತೋಟದಲ್ಲಿ ನಡೆಸಲಾಯಿತು ಎಂದು ಕುಟುಂಬ ಮೂಲಗಳು ತಿಳಿಸಿವೆ.

ಬಡ್ತಿ ಶಿಕ್ಷಕರಿಗೆ ಸನ್ಮಾನ



ಮೊಳಕಾಲ್ಮೂರು: ತಾಲೂಕಿನ ಬಿಜಿಕೆರೆ ಗ್ರಾಮದ ಕರ್ನಾಟಕ ಪಬ್ಲಿಕ್ ಶಾಲೆಯ ಪ್ರಾಥಮಿಕ ವಿಭಾಗದ ಮುಖ್ಯ ಶಿಕ್ಷಕರಾಗಿ ಬಡ್ತಿ ಹೊಂದಿರುವ ಎ.ಕೆ. ತಿಪ್ಪೇಸ್ವಾಮಿ ಅವರನ್ನು ಶಾಲಾ ಆಡಳಿತ ಮಂಡಳಿ ಉಪಾಧ್ಯಕ್ಷ ಬೊಮ್ಮಣ್ಣ ಸನ್ಮಾನಿಸಿ ಅಭಿನಂದಿಸಿದರು. ಈ ವೇಳೆ ಉಪ ಪ್ರಾಂಶುಪಾಲ ಷಣ್ಮುಖಪ್ಪ, ಶಿಕ್ಷಕರಾದ ಉಮಾಶಂಕರ್, ಜಗದೀಶ್, ತಿಪ್ಪೇಸ್ವಾಮಿ, ಲತಾ, ಬಸವರಾಜ, ಚಿಕ್ಕಣ್ಣ ಇದ್ದರು.

ಬಿಎಸ್‌ವೈ ಪುರ ಪ್ರವೇಶಕ್ಕೆ ಸಾಂಸ್ಕೃತಿಕ ಸ್ಪರ್ಶ

ಕಲಾ ತಂಡಗಳ ಮೆರುಗು | ಸಾವಿರಕ್ಕೂ ಹೆಚ್ಚು ಮಹಿಳೆಯರಿಂದ ಪೂರ್ಣಕುಂಭ ಸ್ವಾಗತ | ಸ್ತಬ್ಧಚಿತ್ರಗಳ ಮೆರವಣಿಗೆ

• **ಕನ್ನಡಪ್ರಭ ವಾರ್ತೆ** ಚಿತ್ರದುರ್ಗ

ಅಭಿಮಾನೋತ್ಸವದಲ್ಲಿ ಪಾಲ್ಗೊಳ್ಳಲು ಆಗಮಿಸುವ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರನ್ನು ಅದ್ಧೂರಿಯಾಗಿ ಸ್ವಾಗತಿಸಲು ಕೋಟೆನಾಡು ಚಿತ್ರದುರ್ಗ ಸಜ್ಜಾಗಿದೆ. ಬಿಎಸ್‌ವೈ ಪುರಪ್ರವೇಶಕ್ಕೆ ಸಾಂಸ್ಕೃತಿಕ ಸ್ಪರ್ಶ ನೀಡಲು ಸಕಲ ಸಿದ್ಧತೆಗಳು ಭರದಿಂದ ಸಾಗಿವೆ.

ಮೇ 8ರ ಶುಕ್ರವಾರ ಸಂಜೆ 4 ಗಂಟೆ ಸುಮಾರಿಗೆ ಹೊಳಲ್ಕೆರೆ ರಸ್ತೆಯ ಕನಕ ವೃತ್ತಕ್ಕೆ ಆಗಮಿಸುವ ಯಡಿಯೂರಪ್ಪ ಅವರನ್ನು ಒಂದು ಸಾವಿರ ಮಹಿಳೆಯರು ಪೂರ್ಣಕುಂಭದೊಂದಿಗೆ ಸ್ವಾಗತಿಸಲಿದ್ದಾರೆ. ಇದೇ ಸಂದರ್ಭದಲ್ಲಿ ರೈತರು ಸಾಂಪ್ರದಾಯಿಕ ರಾಶಿ ಪೂಜೆ ಯೊಂದಿಗೆ ರೈತ ಗೌರವ ಸಲ್ಲಿಸಲಿದ್ದಾರೆ. ಕನಕದಾಸ ವೃತ್ತದ ಸಮೀಪದ ಚಂದ್ರವಳ್ಳಿ ಮೈದಾನದಿಂದ ಸಾಗುವ ಮೆರವಣಿಗೆಯಲ್ಲಿ ಯಡಿಯೂರಪ್ಪನವರನ್ನು ಪುಷ್ಪಾಲಂಕೃತ ಸಾರೋಟ್‌ನಲ್ಲಿ ಕುಳ್ಳಿರಿಸಿ ಮೆರವಣಿಗೆಯಲ್ಲಿ ಕರೆ ತರಲಾಗುವುದು.

2000ಕ್ಕೂ ಹೆಚ್ಚಿನ ಸಂಖ್ಯೆಯ ರೈತರು ನೇಗಿಲು ಹಿಡಿದು ಶಿಸ್ತುಬದ್ಧವಾಗಿ ಮೆರವಣಿಗೆಯಲ್ಲಿ ರೈತ ಘೋಷಣೆಯೊಂದಿಗೆ ನಡೆದು ಬರಲಿದ್ದಾರೆ. ಒನಕೆ ಓಬವ್ವನ ನೆಲದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ 'ನಾರಿ ಶಕ್ತಿ ವಂದನ್ ಕಾಯ್ದೆಗೆ ಗೌರವ ಸಲ್ಲಿಸಲು 200ಕ್ಕೂ ಹೆಚ್ಚು ಮಹಿಳೆಯರು ಒನಕೆ ಓಬವ್ವನ ಪಾತ್ರಧಾರಿಗಳಾಗಿ ಶಿಸ್ತುಬದ್ಧವಾಗಿ ಮೆರವಣಿಗೆಯಲ್ಲಿ ನಡೆದುಬರಲಿದ್ದಾರೆ. ರಾಜ್ಯದ ವಿವಿಧ ಮೂಲೆಗಳಿಂದ ಆಗಮಿಸುತ್ತಿರುವ ಸುಮಾರು 25ಕ್ಕೂ ಹೆಚ್ಚು ಸಾಂಸ್ಕೃತಿಕ ಹಾಗೂ ಜನಪದ ತಂಡಗಳು ಈ ಮೆರವಣಿಗೆಯಲ್ಲಿ ಭಾಗವಹಿಸುತ್ತಿವೆ.

ಯಡಿಯೂರಪ್ಪನವರ ಹೋರಾಟದ ದಿನಗಳ ನೆನಪಾಗಿ ಉಳಿದಿರುವ ಅವರ ವಾಹನ (ಅಂಬಾಸಿಡರ್ ಕಾರು ಇಪ್ಕ 45) ಸಹ ಪ್ರಮುಖ ಆಕರ್ಷಣೆಯಾಗಲಿದೆ. ಮೆರವಣಿಗೆಗೆ ವಿಶೇಷ ಮೆರಗು ನೀಡಲು ಹಾಗೂ ಯಡಿಯೂರಪ್ಪನವರು ನಡೆದು ಬಂದ ಹಾದಿ, ಸಾಧನೆ ಹಾಗೂ ಅವರು ಮುಖ್ಯಮಂತ್ರಿಗಳಾಗಿದ್ದ ಅವಧಿಯಲ್ಲಿ ನೀಡಲಾದ ಜನಪ್ರಿಯ ಯೋಜನೆಗಳಾದ ಭಾಗ್ಯಲಕ್ಷ್ಮೀ, ಹೆಣ್ಣುಮಕ್ಕಳಿಗೆ ಸೈಕಲ್ ವಿತರಣೆ, ಕೃಷಿ ಬಜೆಟ್ ಮೊದಲಾದವುಗಳನ್ನು ಪ್ರತಿಬಿಂಬಿಸುವ ಸ್ತಬ್ಧ ಚಿತ್ರಗಳು ಮೆರವಣಿಗೆಯ ಪ್ರಮುಖ ಆಕರ್ಷಣೆಗಳಾಗಲಿವೆ. ನಾಡಿನ ಹೆಸರಾಂತ ಕಲಾವಿದರು ಈ ಸ್ತಬ್ಧ ಚಿತ್ರಗಳನ್ನು ರೂಪಿಸುತ್ತಿದ್ದಾರೆ.

ಮೆರವಣಿಗೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ಸ್ವಾಗತ ಸಮಿತಿಯ ಕಾರ್ಯಾಧ್ಯಕ್ಷರೂ ಆದ ಮಾಜಿ ಸಚಿವ ಶ್ರೀರಾಮುಲು ಅವರೂ ಸೇರಿದಂತೆ ಅನೇಕ ಜನಪ್ರತಿನಿಧಿಗಳು ಭಾಗವಹಿಸಲಿದ್ದಾರೆ.



ಯಡಿಯೂರಪ್ಪ ಅವರು ಮುಖ್ಯಮಂತ್ರಿಯಾಗಿದ್ದಾಗ ಘೋಷಿಸಿದ ಯೋಜನೆಗಳ ಸ್ತಬ್ಧ ಚಿತ್ರಗಳಿಗೆ ಕಲಾವಿದರು ಅಂತಿಮ ಸ್ಪರ್ಶ ನೀಡುತ್ತಿದ್ದಾರೆ.



ಯಡಿಯೂರಪ್ಪನವರು ಪುರ ಪ್ರವೇಶದ ಹಿನ್ನಲೆಯಲ್ಲಿ ರೈತ ಮೆರವಣಿಗೆಗೆ ಚಿತ್ರದುರ್ಗದ ಕಾಲೇಜು ಆವರಣದಲ್ಲಿ ನೇಗಿಲುಗಳು ತಯರಾಗುತ್ತಿರುವುದು.

ಕಸಾಪ ಅಭಿವೃದ್ಧಿಗೆ ಮೈಸೂರು ನಾಲ್ವಡಿ ಕೃಷ್ಣರಾಜ ಒಡೆಯರ್ ಪಾತ್ರ ಅಪಾರ

ಕಸಾಪ ಸಂಸ್ಥಾಪನಾ ದಿನಾಚರಣೆಯಲ್ಲಿ ಅಧ್ಯಕ್ಷ ಶಾಂತಪ್ಪ ಹೇಳಿಕೆ

• **ಕನ್ನಡಪ್ರಭ ವಾರ್ತೆ** ಹೊಸದುರ್ಗ

ಕನ್ನಡ ಸಾಹಿತ್ಯ ಪರಿಷತ್ತು ಇಂದು ಬಹಳ ಬೃಹದಾಕಾರವಾಗಿ ಬೆಳಯಲಿಕ್ಕೆ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಪಾತ್ರ ಅಪಾರವಾದದ್ದು ಎಂದು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎಂ. ಆರ್.ಶಾಂತಪ್ಪ ತಿಳಿಸಿದರು.

ಪಟ್ಟಣದ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಆಯೋಜಿಸಲಾಗಿದ್ದ ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೃಷ್ಣರಾಜ ಒಡೆಯರ್ ಮತ್ತು ಅರಸು ಮನೆತವನ್ನು ಸ್ಮರಿಸಲೇಬೇಕು, ಕನ್ನಡಕ್ಕೆ ತನ್ನದೆಯಾದ ಸ್ಥಾನಮಾನವಿದೆ, ಕನ್ನಡ ವಿಚಾರ ಬಂದಾಗ ಎಲ್ಲರೂ ಧ್ವನಿ ಎತ್ತಿಬೇಕಿದೆ ಎಂದರು.

ಪರಿಷತ್ತಿನ ಉಪಾಧ್ಯಕ್ಷ ನಾಗತಿಹಳ್ಳಿ ಮಂಜುನಾಥ್ ಮಾತನಾಡಿ, ಸುಧೀರ್ಘ ಅವಧಿಯಲ್ಲಿ ನಾಡಿನ ಸಹಸ್ರಾರು ಸಾಹಿತಿಗಳು. ಲೇಖಕರು, ಕಾದಂಬರಿ ಕಾರರು, ನಾಟಕಕಾರರು ಸೇರಿದಂತೆ ಸಾಹಿತ್ಯ ಕ್ಷೇತ್ರದಲ್ಲಿ ಬೆಳೆದಿದ್ದಾರೆ ಮತ್ತು ಬೆಳಸಿದ್ದಾರೆ, ನಮ್ಮ ಕನ್ನಡ ಭಾಷೆಗೆ 8 ಜ್ಞಾನಪೀಠ ಪುರಸ್ಕೃತರು ಸಿಕ್ಕಿರುವುದು ನಮ್ಮೆಲ್ಲರ ಸೌಭಾಗ್ಯ ಮತ್ತು ಕನ್ನಡದ ಹೆಮ್ಮೆಯ ವಿಚಾರ ಎಂದರು.

ನಿಕಟಪೂರ್ವ ಅಧ್ಯಕ್ಷ ಬಿ.ಪಿ. ಓಂಕಾರಪ್ಪ ಮಾತನಾಡಿದರು. ಕಾರ್ಯಕ್ರಮಕ್ಕೂ ಮುನ್ನ ನಾಲ್ವಡಿ ಕೃಷ್ಣರಾಜ ಒಡೆಯರ್ ಮತ್ತು ತಾಯಿ ಭುವನೇಶ್ವರಿಯ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಲಾಯಿತು. ಈ ವೇಳೆ ಮಾಜಿ ಅಧ್ಯಕ್ಷ ಬಾ.ಮೈಲಾರಪ್ಪ, ಕಾರ್ಯದರ್ಶಿ ಎಂ. ಎಸ್.ರಮೇಶ್, ಹಿರಿಯ ಉಪಾಧ್ಯಕ್ಷ ಕೆ.ಬಿ.ಚಂದ್ರಯ್ಯ, ಸಹ ಕಾರ್ಯದರ್ಶಿ ಅಂಬರೀಷ್, ಕವಿಯತ್ರಿ ಕುಮಾರಿ ನಳಿನಾ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.



ಹೊಸದುರ್ಗ ಪಟ್ಟಣದ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಆಯೋಜಿಸಲಾಗಿದ್ದ ಪರಿಷತ್ತಿನ ಸಂಸ್ಥಾಪನಾ ದಿನ ಕಾರ್ಯಕ್ರಮವನ್ನು ಆಚರಿಸಲಾಯಿತು.

ನಗರಸಭೆ ಆವರಣದಲ್ಲಿ ಶಾಸಕರ ನೂತನ ಕಚೇರಿ ಉದ್ಘಾಟನೆ



ಚಿತ್ರದುರ್ಗ ನಗರಸಭೆ ಆವರಣದಲ್ಲಿ ನಿರ್ಮಿಸಲಾಗಿರುವ ನೂತನ ಶಾಸಕರ ಕಚೇರಿಯನ್ನು ಶಾಸಕ ವೀರೇಂದ್ರ ಪಪ್ಪಿ ಉದ್ಘಾಟಿಸಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು.

ಚಿತ್ರದುರ್ಗ: ನಗರಸಭೆ ಆವರಣದಲ್ಲಿ ನಗರಸಭೆ ಸಾಮಾನ್ಯ ನಿಧಿಯಿಂದ 13 ಲಕ್ಷ ರು. ವೆಚ್ಚದಲ್ಲಿ ನಿರ್ಮಿಸಲಾಗಿರುವ ಶಾಸಕರ ನೂತನ ಕಾರ್ಯಾಲಯವನ್ನು ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಬುಧವಾರ ಉದ್ಘಾಟಿಸಿದರು.

ಈ ವೇಳೆ ಮಾತನಾಡಿದ ಶಾಸಕರು, ಬೇಸಿಗೆ ಆರಂಭವಾಗಿರುವುದರಿಂದ ಎಲ್ಲಿಯೂ ಕುಡಿಯುವ ನೀರಿಗೆ ಸಮಸ್ಯೆಯಾಗಬಾರದು. 35 ವಾರ್ಡ್‌ಗಳಲ್ಲಿಯೂ ಸ್ವಚ್ಛತೆ ಕಾಪಾಡಬೇಕು. ಮೂಲಭೂತ ಸೌಕರ್ಯಗಳಾದ ಬೀದಿ ದೀಪ, ರಸ್ತೆ, ಚರಂಡಿ ಕುಡಿಯುವ ನೀರು ಪೂರೈಕೆಗೆ ಒತ್ತು ಕೊಡಲಾಗುವುದು. ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸುವುದಕ್ಕಾಗಿಯೇ ಕಾರ್ಯಾಲಯ ತೆರೆಯಲಾಗಿದೆ ಸಾರ್ವಜನಿಕರು ತಮ್ಮ ಅಹವಾಲುಗಳನ್ನು ಸಲ್ಲಿಸಬಹುದಾಗಿದೆ ಎಂದು ಹೇಳಿದರು.

ಈ ವೇಳೆ ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಆರ್.ಕೆ. ಸರ್ದಾರ್, ನಟ ದೊಡ್ಡಣ್ಣ, ನಗರಸಭೆ ಮಾಜಿ ಸದಸ್ಯ ಟಿ.ರಮೇಶ್, ಮಹೇಶ್, ಸೈಟ್ ಬಾಬಣ್ಣ ನಗರಸಭೆ ಪೌರಾಯುಕ್ತೆ ಲಕ್ಷ್ಮಿ, ಪ್ರಥಮ ದರ್ಜೆ ಗುತ್ತಿಗೆದಾರ ಬ್ಯಾಲಾಳ್ ಜಯಣ್ಣ ಮತ್ತಿತರರು ಸಂದರ್ಭದಲ್ಲಿ ಹಾಜರಿದ್ದರು.

ಹಣ ಹಂಚದೇ ಗೆದ್ದದ್ದು ಪ್ರಜಾ ಪ್ರಭುತ್ವದ ಗೆಲುವು

ಹಿರಿಯೂರು: ಹಣ ಹಂಚದೇ ತಮಿಳುನಾಡು ಚುನಾವಣೆಯಲ್ಲಿ ದಳಪತಿ ವಿಜಯ್ ಸಾರಥ್ಯದ ಟಿವಿಕೆ ಪಕ್ಷ ಗೆಲುವು ಸಾಧಿಸಿದ್ದು ಪ್ರಜಾಪ್ರಭುತ್ವದ ಗೆಲುವು ಎಂದು ಖ್ಯಾತ ಕಾದಂಬರಿಕಾರ ಡಿ.ಸಿ.ಪಾಣಿ ಹೇಳಿದ್ದಾರೆ.



ಪತ್ರಿಕಾ ಹೇಳಿಕೆ ನೀಡಿದ ಅವರು, ಜಾತಿ ಹಾಗೂ ಧರ್ಮಗಳು ಸಹ ಈ ಚುನಾವಣೆಯಲ್ಲಿ ಮುನ್ನೆಲೆಗೆ ಬಂದಿಲ್ಲ ಎಂಬುದು ಗಮನಿಸಬೇಕಾದ ಮತ್ತೊಂದು ಮುಖ್ಯವಾದ ಅಂಶವಾಗಿದೆ. ಚುನಾವಣೆ ಗಳಲ್ಲಿ ಹಣ, ಜಾತಿ ಹಾಗೂ ಧರ್ಮ ಗೌಣವಾದಾಗ ಈ ದೇಶದ ಅರ್ಧ ಸಮಸ್ಯೆಗಳು ತಾವಾಗಿಯೇ ಪರಿಹಾರವಾಗಲಿವೆ ಎಂದಿದ್ದಾರೆ.

ಬಂಜಾರ ಸಮುದಾಯ ಅಭಿವೃದ್ಧಿಗೆ ಬಿಎಸ್‌ವೈ ಸಹಕಾರ

ಸತೀಶ್ ಕುಮಾರ್ ಅಭಿಮತ | ಅಭಿಮಾನೋತ್ಸವದಲ್ಲಿ ಸಮುದಾಯ ಭಾಗವಹಿಸಲು ಕರೆ

• **ಕನ್ನಡಪ್ರಭ ವಾರ್ತೆ** ಚಿತ್ರದುರ್ಗ

ಬಿ.ಎಸ್.ಯಡಿಯೂರಪ್ಪನವರು ಮುಖ್ಯಮಂತ್ರಿಗಳಾಗಿದ್ದಾಗ ಬಂಜಾರ ಸಮುದಾಯದ ಅಭಿವೃದ್ಧಿಗೆ ಸಹಕಾರ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಮೇ 9ರಂದು ಚಿತ್ರದುರ್ಗದಲ್ಲಿ ನಡೆಯಲಿರುವ ಅಭಿಮಾನೋತ್ಸವ ಕಾರ್ಯಕ್ರಮಕ್ಕೆ ಜಿಲ್ಲೆಯ ವಿವಿಧೆಡೆಯಿಂದ ಬಂಜಾರ ಸಮುದಾಯದ ಬಂಧುಗಳು ಸ್ವ ಪ್ರೇರಣೆಯಿಂದ ಆಗಮಿಸಬೇಕು ಎಂದು ಬಂಜಾರ (ಲಂಬಾಣಿ) ಸಮಾಜದ ಜಿಲ್ಲಾ ಅಧ್ಯಕ್ಷ ಎಂ.ಸತೀಶ್ ಕುಮಾರ್ ಕರೆ ನೀಡಿದರು.

ಚಿತ್ರದುರ್ಗದ ಬಂಜಾರ (ಲಂಬಾಣಿ) ಸಮಾಜದ ಕಚೇರಿಯಲ್ಲಿ ಬುಧವಾರ ನಡೆದ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಯಡಿಯೂರಪ್ಪರವರು ರಾಜ್ಯದ ಮುಖ್ಯಮಂತ್ರಿಗಳಾಗಿದ್ದಾಗ ರಾಜ್ಯದ ಬಂಜಾರರ ಅಭಿವೃದ್ಧಿಗಾಗಿ ತಾಂಡ ಅಭಿವೃದ್ಧಿ ನಿಗಮವನ್ನು ಸ್ಥಾಪನೆ ಮಾಡುವುದರ ಮೂಲಕ ತಾಂಡಗಳ ಅಭಿವೃದ್ಧಿ ಮಾಡಿದ್ದಾರೆ. ಜಿಲ್ಲಾ ತಾಲೂಕು ಹೋಬಳಿಗಳಲ್ಲಿ ಸೇವಾಲಾಲ್ ಭವನಗಳನ್ನು ನಿರ್ಮಿಸಿದ್ದಾರೆ. ಇದಲ್ಲದೆ ಸಂತಶ್ರೀ ಸೇವಾಲಾಲ್ ಮಹಾರಾಜರ ಜನ್ಮಸ್ಥಳವಾದ ಸೂರಗೊಂಡನಕೊಪ್ಪದಲ್ಲಿ ವಿವಿಧ ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ.

ಈ ಹಿನ್ನೆಲೆಯಲ್ಲಿ ನಮ್ಮ ಸಮುದಾಯಕ್ಕೆ ಇಷ್ಟೊಂದು ಅಭಿವೃದ್ಧಿ ಕಾರ್ಯವನ್ನು ಮಾಡಿರುವ ವ್ಯಕ್ತಿಯ ಅಭಿಮಾನೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವುದು ನಮ್ಮ ಕರ್ತವ್ಯ ಎಂದರು.

ಅವರು ಜನಸೇವೆಗಾಗಿ ತಮ್ಮ ಜೀವನವನ್ನೇ ಮುಡುಪಾಗಿ ಇಟ್ಟಿದ್ದಾರೆ. ದಲಿತರು, ಪರಿಶಿಷ್ಟ ಜಾತಿ ಮತ್ತು ಪಂಗಡ, ಮಹಿಳೆಯರಿಗೆ ಧ್ವನಿಯಾಗಿ ಕೆಲಸ ಮಾಡಿದ್ದಾರೆ. ಅಧಿಕಾರಕ್ಕಾಗಿ ಎಂದು ಸಹ ಹೋರಾಟವನ್ನು ಮಾಡಲಿಲ್ಲ. ಬಡವರ ಕಣ್ಣೀರನ್ನು ಒರೆಸುವ ಸಲುವಾಗಿ ಕೆಲಸ ಮಾಡಿದ್ದಾರೆ. 50 ವರ್ಷ ಬಡವರ ಪರವಾಗಿ ರಾಜಕೀಯ ಮಾಡಿದ್ದಾರೆ. ಬಿಎಸ್‌ವೈ ಎಂದರೆ ಹೋರಾಟ ಎಂಬ ಮನೋಭಾವ ಎಲ್ಲರಲ್ಲೂ ಸಹ ಮೂಡಿದೆ. ಛಲಕ್ಕೆ ಮತ್ತೊಂದು ಹೆಸರೇ ಯಡಿಯೂರಪ್ಪ ಎನ್ನಬಹುದಾಗಿದೆ. ಹಾಗಾಗಿ ಅವರ ಕಾರ್ಯಕ್ರಮ ಯಶಸ್ವಿಯಾಗಲು ನಾವೆಲ್ಲಾ ಸಹಕಾರ ನೀಡೋಣ ಎಂದರು. ಈ ಸಂದರ್ಭದಲ್ಲಿ ಬಂಜಾರ ಸಮಾಜದ ಹೊಸದುರ್ಗ ತಾಲೂಕು ಅಧ್ಯಕ್ಷ ಪ್ರವೀಣ್ ನಾಯ್ಕ, ಉಪಾಧ್ಯಕ್ಷ ತಿಪ್ಪೇಸ್ವಾಮಿ ನಾಯ್ಕ, ಹೊಳಲ್ಕೆರೆಯ ಸದಸ್ಯ ಕಾಳ್ಯ ನಾಯ್ಕ, ಈರಾನಾಯ್ಕ, ಶೋಭಾ, ಆನಂದಪ್ಪ, ಪರಶುರಾಮ್, ಮಂಜನಾಯ್ಕ ಮುಂತಾದವರು ಹಾಜರಿದ್ದರು.



ಚಿತ್ರದುರ್ಗದ ಬಂಜಾರ ಸಮಾಜದ ಕಚೇರಿಯಲ್ಲಿ ಬುಧವಾರ ಯಡಿಯೂರಪ್ಪನವರ ಅಭಿಮಾನೋತ್ಸವ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಬಂಜಾರ ಸಮಾಜದ ಜಿಲ್ಲಾ ಅಧ್ಯಕ್ಷ ಸತೀಶ್ ಕುಮಾರ್ ಮಾತನಾಡಿದರು.

ಸರ್ಕಾರದ ಹಣ ವಾಪಸ್ಸು ಪಡೆಯುವಂತೆ ಮನವಿ



ಖಜಾನೆಯಿಂದ ನನ್ನ ಖಾತೆಗೆ ಜಮೆ ಆಗಿರುವ ಒಂದು ಲಕ್ಷದ ಐವತ್ತು ಸಾವಿರ ರೂ. ಗಳನ್ನು ಸರ್ಕಾರದ ಖಾತೆಗೆ ವಾಪಸ್ ತೆಗೆದುಕೊಳ್ಳುವಂತೆ ಆಜಾದ್‌ನಗರದ ನಿವಾಸಿ ಹಯಾತ್‌ಬಾಷ ಬುಧವಾರ ಅಪರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.

• **ಕನ್ನಡಪ್ರಭ ವಾರ್ತೆ** ಚಿತ್ರದುರ್ಗ

ಖಜಾನೆಯಿಂದ ನನ್ನ ಖಾತೆಗೆ ಜಮೆ ಆಗಿರುವ 1.5 ಲಕ್ಷ ರು.ಗಳನ್ನು ಸರ್ಕಾರದ ಖಾತೆಗೆ ವಾಪಸ್ ತೆಗೆದುಕೊಳ್ಳುವಂತೆ ಆಜಾದ್ ನಗರದ ನಿವಾಸಿ ಹಯಾತ್‌ಬಾಷ ಬುಧವಾರ ಅಪರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.

ಹಣ್ಣಿನ ವ್ಯಾಪಾರ ಮಾಡಿಕೊಂಡು ಜೀವನ ಸಾಗಿಸುತ್ತಿರುವ ನನಗೆ ಪ್ರಗತಿ ಗ್ರಾಮೀಣ ಬ್ಯಾಂಕ್‌ನಲ್ಲಿರುವ ನನ್ನ ಖಾತೆಗೆ ಮಾರ್ಚ್‌ನಲ್ಲಿ ಮೂರು ಬಾರಿ ಒಟ್ಟು 1.5 ಲಕ್ಷ ರು. ಜಮಾ ಆಗಿರುತ್ತದೆ. 15 ದಿನಗಳ ಹಿಂದೆ ಅಪರಿಚಿತರಿಬ್ಬರು ನಮ್ಮ ಮನೆಯ ಹತ್ತಿರ ಬಂದು ನಾವು ನಗರಸಭೆಯವರು ನಿಮ್ಮ ಖಾತೆಗೆ ಜಮಾ ಆಗಿರುವ ಹಣದಲ್ಲಿ 50 ಸಾವಿರ ರು. ಇಟ್ಟುಕೊಂಡು ಉಳಿದ ಹಣವನ್ನು ನೀಡಿ ಎಂದು ಕೇಳಿದಾಗ ಯಾವುದೇ ಕಾರಣಕ್ಕೂ ನಿಮಗೆ ಕೊಡುವುದಿಲ್ಲವೆಂದು ಹೇಳಿ ಕಳಿಸಿದ್ದೇವೆ. ಹಾಗಾಗಿ ನನ್ನ ಖಾತೆಗೆ ಜಮಾ ಆಗಿರುವ ಹಣವನ್ನು ಸರ್ಕಾರದ ಖಾತೆಗೆ ವಾಪಸ್ ತೆಗೆದುಕೊಳ್ಳುವಂತೆ ಹಯಾತ್‌ಬಾಷ ಅಪರ ಜಿಲ್ಲಾಧಿಕಾರಿಯವರಲ್ಲಿ ಕೋರಿದರು.

ಈ ವೇಳೆ ಪ್ರಧಾನಮಂತ್ರಿಗಳ ಹದಿನೈದು ಅಂಶಗಳ ಕಾರ್ಯಕ್ರಮದ ಜಿಲ್ಲಾ ಸದಸ್ಯ ಎಚ್.ಆರ್.ಮಹಮದ್, ಜಮೀರ್ ಖಾನ್, ಸಾದತ್‌ವುಲ್ಲಾ ಇವರು ಹಾಜರಿದ್ದರು.

ಶುಲ್ಕ ಮರುಪಾವತಿ: ಅರ್ಜಿ ಅವಧಿ ವಿಸ್ತರಣೆ

ದಾವಣಗೆರೆ: ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2025-26ನೇ ಸಾಲಿನ ಮೆಟ್ರಿಕ್ ನಂತರದ ಕೋರ್ಸ್‌ಗಳ ವಿದ್ಯಾರ್ಥಿಗಳಿಗೆ ನೀಡಲಾಗುವ ''ಶುಲ್ಕ ಮರುಪಾವತಿ'' ಸೌಲಭ್ಯದ ಅರ್ಜಿ ಸಲ್ಲಿಕೆ ಅವಧಿಯನ್ನು ಮೇ 16 ರವರೆಗೆ ವಿಸ್ತರಿಸಲಾಗಿದೆ. ಅರ್ಹ ಹಿಂದುಳಿದ ವರ್ಗಗಳ ಹಾಗೂ ಪ್ರವರ್ಗ-1ರ ಅಲೆಮಾರಿ/ ಅರೆಅಲೆಮಾರಿ ವಿದ್ಯಾರ್ಥಿಗಳು ಸದುಪಯೋಗ ಪಡೆಯಬಹುದು. ಮಾಹಿತಿಗಾಗಿ ದೂ: 8050770004 ಸಂಪರ್ಕಿಸಬಹುದು.

ಗೌರವಾನ್ವಿತ 2ನೇ ಅಪರ ಜಿಲ್ಲಾ ನ್ಯಾಯಾಧೀಶರ ನ್ಯಾಯಾಲಯ, ಚಿತ್ರದುರ್ಗ
ಪಿ & ಎಸ್.ಸಿ. ನಂ.33/2026

ಅರ್ಜಿದಾರರು: 1.ಜಿ.ಎಸ್.ಶಿವಕುಮಾರ್ ಬಿನ್ ಲೇಟ್ ಜಿ.ಶಿವಪ್ಪ, ಸುಮಾರು 76 ವರ್ಷ, ವಿಳಾಸ: ನಂ.ಎ-303, ವೈಷ್ಣವಿ ಸ್ಲೆಂಡರ್ ನಂ.12, 3ನೇ ಕ್ರಾಸ್, ಪೂಜಾರಿ ಲೇಔಟ್, ಆರ್.ಎಂ.ವಿ 2ನೇ ಸ್ಟೇಜ್, ಬೆಂಗಳೂರು ಉತ್ತರ. 2) ಗಿರಿ ಎಂ ಜಾನಕಲ್ ಬಿನ್ ಜಿ.ಎಸ್.ಮಂಜುನಾಥ್, ಸುಮಾರು 47 ವರ್ಷ. ವಿಳಾಸ: ಭೀಮಸಮುದ್ರ ಗ್ರಾಮ, ಚಿತ್ರದುರ್ಗ ತಾಲ್ಲೂಕು ಮತ್ತು ಜಿಲ್ಲೆ.

ವಿರುದ್ಧ:-

ಎದುರುದಾರರು: ಯಾರು ಇಲ್ಲ.

ಸಾರ್ವಜನಿಕ ಪ್ರಕಟಣೆ

ಮೇಲೆ ಹೇಳಿರುವ 1 ಮತ್ತು 2ನೇ ಅರ್ಜಿದಾರರು. ಈ ಅರ್ಜಿಯನ್ನು ಜಿ.ಎಸ್.ಮುರುಗೆಮ್ಮ ಕೋಂ ಜಿ.ಶಿವಪ್ಪ ಇವರು ದಿನಾಂಕ 21-12-2017 ರಂದು ಅರ್ಜಿದಾರರ ಹೆಸರಿಗೆ ಷೆಡ್ಯೂಲ್ ಸ್ವತ್ತನ್ನು ವಿಲ್ ಮೂಲಕ ಬರೆದು ದಿನಾಂಕ 02-02-2022 ರಲ್ಲಿ ಮರಣ ಹೊಂದಿರುತ್ತಾರೆ. ಅರ್ಜಿದಾರರು ಪ್ರೊಬೇಟ್ ಪ್ರಮಾಣಪತ್ರಕ್ಕಾಗಿ ಈ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಮೇಲಿನ ಮೊಕದ್ದಮೆಯನ್ನು ನ್ಯಾಯಾಲಯದಲ್ಲಿ ದಿನಾಂಕ: 06-06-2026 ರಂದು ಬೆಳಗ್ಗೆ 11.00ಗಂಟೆಗೆ ವಿಚಾರಣೆಗೆ ನಿಗದಿಪಡಿಸಿದ್ದು, ಯಾರಾದಾದರೂ ಆಕ್ಷೇಪಣೆ ಇದ್ದಲ್ಲಿ ಮೊಕದ್ದಮೆಯಲ್ಲಿ ಖುದ್ದಾಗಿ ಆಗಲಿ ಅಥವಾ ವಕೀಲರ ಮೂಲಕವಾಗಲಿ ಹಾಜರಾಗಿ ತಕರಾರು ಸಲ್ಲಿಸತಕ್ಕದ್ದು. ತಪ್ಪಿದಲ್ಲಿ ಯಾರದೇ ತಕರಾರು ಇಲ್ಲವೆಂದು ಪರಿಗಣಿಸಿ ಕಾನೂನು ರೀತಿ ಏಕಪಕ್ಷಿಯವಾಗಿ ಮುಂದುವರೆಸಲಾಗುವುದು.

ಷೆಡ್ಯೂಲ್

1. ಚಿತ್ರದುರ್ಗ ಜಿಲ್ಲೆ ಮತ್ತು ತಾಲ್ಲೂಕು, ಹಿರೇಗುಂಟನೂರು ಹೋಬಳಿ, ಬೆಟ್ಟದನಾಗೇನಹಳ್ಳಿ ಗ್ರಾಮದ ರಿ.ಸ.ನಂ.83/2, 2 ಎಕರೆ 30 ಗುಂಟೆ ಜಮೀನಿಗೆ ಚಕ್ಕುಬಂದಿ: : ಪೂರ್ವಕ್ಕೆ ಎಸ್.ಸಿ.ಸುಲೋಚನಮ್ಮರವರ ಜಮೀನು. ಪಶ್ಚಿಮಕ್ಕೆ : ಜಿ.ಎಸ್.ಮಂಜುನಾಥ ಮತ್ತು ಜಿ.ಎಸ್.ಶಿವಕುಮಾರ್ ಜಮೀನು, ಉತ್ತರಕ್ಕೆ : ಜಿ.ಎಸ್.ಮಂಜುನಾಥ ಮತ್ತು ಜಿ.ಎಸ್.ಶಿವಕುಮಾರ್ ಜಮೀನು. ದಕ್ಷಿಣಕ್ಕೆ : 4ನೇ ಚಾನಲ್ ಮತ್ತು ರಸ್ತೆ.
2. ಚಿತ್ರದುರ್ಗ ನಗರದ ವಾರ್ಡ್ ನಂ.32. ವಿ.ಪಿ.ಬಡಾವಣೆ, 5ನೇ ಬ್ಲಾಕ್‌ನಲ್ಲಿರುವ ಆರ್.ಸಿ.ಸಿ ಬಿಲ್ಡಿಂಗ್ ಮತ್ತು ನಿವೇಶನದ ಖಾತೆ ಸಂಖ್ಯೆ: 2237/9096/7674/4296 ವಿಸ್ತೀರ್ಣ ಪೂರ್ವ-ಪಶ್ಚಿಮ: 130 ಅಡಿ, ಉತ್ತರ-ದಕ್ಷಿಣ: 52 ಅಡಿವುಳ್ಳ ಸ್ವತ್ತಿಗೆ ಚೆಕ್ಕುಬಂದಿ: ಪೂರ್ವಕ್ಕೆ : ಕನ್ಸರ್‌ವೆನ್ಸಿ. ಪಶ್ಚಿಮಕ್ಕೆ : ರಾಷ್ಟ್ರೀಯ ಹೆದ್ದಾರಿ. ಉತ್ತರಕ್ಕೆ ಕನ್ಸರ್‌ವೆನ್ಸಿ. ದಕ್ಷಿಣಕ್ಕೆ: ಹೆಚ್.ಎಂ.ಜಿ ಯವರ ಸ್ವತ್ತು

ಸಹಿ/- ಸಿ ತಿಮ್ಮಣ್ಣ
ಅರ್ಜಿದಾರರ ಪರ ವಕೀಲರು
ಸ್ಥಳ: ಚಿತ್ರದುರ್ಗ
ದಿನಾಂಕ: 28-04-2026

ನ್ಯಾಯಾಲಯದ ಆದೇಶದ ಮೇರೆಗೆ
ಸಹಿ/-ಮುಖ್ಯ ಆಡಳಿತಾಧಿಕಾರಿಗಳು
ಪ್ರಧಾನ ಜಿಲ್ಲಾ ಮತ್ತು ಸತ್ರ
ನ್ಯಾಯಾಧೀಶರ ನ್ಯಾಯಾಲಯ, ಚಿತ್ರದುರ್ಗ

ಮಲ್ಲಿಕಾ ಉತ್ಸವವು ಕಲೆ, ಸಂಗೀತ, ನೃತ್ಯ, ನಾಟಕ ಮತ್ತು ಕ್ರೀಡೆಗಳಂತಹ ವಿವಿಧ ಕ್ಷೇತ್ರಗಳಲ್ಲಿ ವಿದ್ಯಾರ್ಥಿಗಳ ಪ್ರತಿಭೆಯನ್ನು ಪ್ರದರ್ಶಿಸುವ ಕಾರ್ಯಕ್ರಮವಾಗಿದೆ. ಮಣಿಪಾಲ್, ಮೈಸೂರು, ಬೆಳಗಾವಿ ಹಾಗೂ ಬಳ್ಳಾರಿ ಸೇರಿದಂತೆ ರಾಜ್ಯದ ವಿವಿಧ ಭಾಗಗಳ 20ಕ್ಕೂ ಹೆಚ್ಚು ಸಂಸ್ಥೆಗಳ ಸುಮಾರು 900ಕ್ಕೂ ಅಧಿಕ ಎಂಜಿನಿಯರಿಂಗ್ ಮತ್ತು ಪದವಿ ಕಾಲೇಜುಗಳ ವಿದ್ಯಾರ್ಥಿಗಳು ಪಾಲ್ಗೊಳ್ಳಲಿದ್ದಾರೆ.

● **ಡಾ. ಎಚ್.ಎಸ್. ಕಿರಣ ಕುಮಾರ್** ನಿರ್ದೇಶಕ.

8, 9ರಂದು ಜಿಎಂ ವಿವಿಯಲ್ಲಿ ಮಲ್ಲಿಕಾ 26.0 ವಾರ್ಷಿಕ ಸಾಂಸ್ಕೃತಿಕ ಉತ್ಸವ



ದಾವಣಗೆರೆ: ನಗರದ ಜಿಎಂ ವಿಶ್ವವಿದ್ಯಾಲಯದಲ್ಲಿ ಮೇ 8 ಮತ್ತು 9ರಂದು ಶೈಕ್ಷಣಿಕ ಸಾಧನೆ ಮತ್ತು ಸಾಂಸ್ಕೃತಿಕ ಪ್ರತಿಭೆಗಳ ಅಪೂರ್ವ ಸಂಗಮವಾಗಿರುವ ಮಲ್ಲಿಕಾ 26.0 ವಾರ್ಷಿಕ ಸಾಂಸ್ಕೃತಿಕ ಉತ್ಸವ ನಡೆಯಲಿದೆಎಂದುಜಿಎಂವಿವಿಯಮಾರ್ಕೆಟಿಂಗ್ ಮತ್ತು ಪ್ರಮೋಷನ್ ಡೀನ್ ಡಾ. ಟಿ.ಎಂ. ವೀರಗಂಗಾಧರ ಸ್ವಾಮಿ ತಿಳಿಸಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಈ ಕುರಿತು ಮಾಹಿತಿ ನೀಡಿದ ಅವರು, ಮೇ 8ರಂದು ಸಂಜೆ 6.30ಕ್ಕೆ ಕಾರ್ಯಕ್ರಮ ಉದ್ಘಾಟನೆ ಆಗಲಿದೆ. ಕೆಎಲ್ಇ ಸಂಸ್ಥೆಯ ಗೌರವ ಕಾರ್ಯಾಧ್ಯಕ್ಷ ಪ್ರಭಾಕರ್ ಕೋರೆ, ಮಾಜಿ ಸಚಿವರಾದ ಮುರುಗೇಶ್ ನಿರಾಣಿ, ಸಿ.ಸಿ.ಪಾಟೀಲ್ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ನಟ ನೆನಪಿರಲಿ ಪ್ರೇಮ್ ವಿಶೇಷ ಅತಿಥಿಯಾಗಿ ಆಗಮಿಸಲಿದ್ದು, ಕೇಂದ್ರದ ಮಾಜಿ ಸಚಿವ ಡಾ. ಜಿ.ಎಂ. ಸಿದ್ದೇಶ್ವರ್ ಅಧ್ಯಕ್ಷತೆ ವಹಿಸಲಿ ದ್ದಾರೆ. ಜಿ.ಎಂ. ವಿಶ್ವವಿದ್ಯಾಲಯದ ಕುಲಾಧಿಪತಿ ಜಿ.ಎಂ.ಲಿಂಗರಾಜು, ಕುಲಪತಿ ಡಾ. ಎಸ್.ಆರ್. ಶಂಕಪಾಲ್ ಆಗಮಿಸಲಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಶ್ರೀಮತಿ ಜಿ.ಎಂ. ಹಾಲಮ್ಮ ಮತ್ತು ಶ್ರೀ ಜಿ. ಮಲ್ಲಿಕಾರ್ಜುನಪ್ಪ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಕೊಡಲ್ಪಡುವ ಕಾಲೇಜು ಮಟ್ಟದಲ್ಲಿ ಶೈಕ್ಷಣಿಕ ಕ್ಷೇತ್ರದಲ್ಲಿ ಅದ್ಭುತ ಸಾಧನೆ ತೋರಿದ 9.5ಕ್ಕಿಂತ ಹೆಚ್ಚು ಸಿಜಿಪಿಎ ಪಡೆದ ಜಿಎಂ ಶಿಕ್ಷಣ ಸಂಸ್ಥೆಯ ನಾಲ್ವರು ವಿದ್ಯಾರ್ಥಿಗಳಿಗೆ ಚಿನ್ನದ ಪದಕ ನೀಡಿ ಗೌರವಿಸಲಾಗುವುದು. ಜೊತೆಗೆ ವಿಟಿಯು ರ್‍ಯಾಂಕ್ ವಿಜೇತ ಜಿಎಂ ಶಿಕ್ಷಣ ಸಂಸ್ಥೆಯ ನಾಲ್ವರು ಸಾಧಕರಿಗೆ ಕಾಲೇಜು ಶುಲ್ಕವನ್ನೆಲ್ಲಾ ವಾಪಸ್ ನೀಡುವ ಮೂಲಕ ಶೈಕ್ಷಣಿಕ ಸಾಧನೆಗೆ ಪ್ರಶಂಸೆ ವ್ಯಕ್ತಪಡಿಸಲಾಗುವುದು ಎಂದರು.

2ನೇ ದಿನ ಸಂಜೆ 6.30 ಗಂಟೆಗೆ ಸಮಾರೋಪ ನಡೆಯಲಿದೆ. ಭೀಮಸಮುದ್ರದ ಶ್ರೀಶೈಲ ಎಜುಕೇಷನಲ್ ಟ್ರಸ್ಟ್ ಅಧ್ಯಕ್ಷ ಜಿ.ಎಂ. ಪ್ರಸನ್ನಕುಮಾರ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಜಿ.ಎಂ. ವಿಶ್ವವಿದ್ಯಾಲಯದ ಕುಲಾಧಿಪತಿ ಜಿ.ಎಂ. ಲಿಂಗರಾಜು, ಸಹ ಉಪ ಕುಲಪತಿ ಡಾ. ಎಂ. ವೇಣುಗೋಪಾಲ ರಾವ್, ಕುಲಸಚಿವ ಡಾ. ಬಿ.ಎಸ್. ಸುನೀಲ್ ಕುಮಾರ್‌ಉಪಸ್ಥಿತಿಯಲ್ಲಿ ಕುಲಪತಿ ಡಾ. ಎಸ್.ಆರ್. ಶಂಕಪಾಲ್ ಅಧ್ಯಕ್ಷತೆ ವಹಿಸಲಿದ್ದಾರೆ. ಖ್ಯಾತ ಗಾಯಕ ವಿಜಯ ಪ್ರಕಾಶ್ ಅವರಿಂದ ಸಂಗೀತ ಸಂಜೆ ನಡೆಯಲಿದೆ. ಇದೇ ವೇದಿಕೆಯಲ್ಲಿ ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳ ವಿಜೇತರಿಗೆ ಬಹುಮಾನ ವಿತರಿಸಲಾಗುವುದು ಎಂದು ಮಾಹಿತಿ ನೀಡಿದರು.

ವಿದ್ಯಾರ್ಥಿ ವ್ಯವಹಾರಗಳ ನಿರ್ದೇಶನಾಲಯದ ನಿರ್ದೇಶಕ ಡಾ. ಎಚ್.ಎಸ್. ಕಿರಣ್ ಕುಮಾರ್ ಮಾತನಾಡಿ, ತಮ್ಮ ನೇತೃತ್ವದಲ್ಲಿ ನಡೆವ ಮಲ್ಲಿಕಾ ಉತ್ಸವವು ಕಲೆ, ಸಂಗೀತ, ನೃತ್ಯ, ನಾಟಕ ಮತ್ತು ಕ್ರೀಡೆಗಳಂತಹ ವಿವಿಧ ಕ್ಷೇತ್ರಗಳಲ್ಲಿ ವಿದ್ಯಾರ್ಥಿಗಳ ಪ್ರತಿಭೆಯನ್ನು ಪ್ರದರ್ಶಿಸುವ ಕಾರ್ಯಕ್ರಮವಾಗಿದೆ. ಮಣಿಪಾಲ್, ಮೈಸೂರು, ಬೆಳಗಾವಿ ಹಾಗೂ ಬಳ್ಳಾರಿ ಸೇರಿದಂತೆ ರಾಜ್ಯದ ವಿವಿಧ ಭಾಗಗಳ 20ಕ್ಕೂ ಹೆಚ್ಚು ಸಂಸ್ಥೆಗಳ ಸುಮಾರು 900ಕ್ಕೂ ಅಧಿಕ ಎಂಜಿನಿಯರಿಂಗ್ ಮತ್ತು ಪದವಿ ಕಾಲೇಜುಗಳ ವಿದ್ಯಾರ್ಥಿಗಳು ಪಾಲ್ಗೊಳ್ಳಲಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ಡಾ. ಎಂ.ಸಂತೋಷ್ ಕುಮಾರ, ಅಭಿಷೇಕ್, ಅರ್ಜುನ್, ಜಿ.ಎಸ್. ವಸಂತ ಕುಮಾರ ಇದ್ದರು.

ಇಂದು ವಿದ್ಯುತ್ ವ್ಯತ್ಯಯ

ದಾವಣಗೆರೆ: ಬೆಸ್ಕಾಂನಿಂದ ನಗರದ ಸಾಯಿ ಫೀಡರ್‌ವ್ಯಾಪ್ತಿಯಲ್ಲಿ ಜಲಸಿರಿ 24x7 ಜಲಸಿರಿ ತುರ್ತು ಕಾಮಗಾರಿ ಹಮ್ಮಿ ಕೊಂಡಿರುವುದರಿಂದ ಮೇ 7ರಂದು ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ. ಬೆಳಗ್ಗೆ 10 ರಿಂದ ಮಧ್ಯಾಹ್ನ 2 ಗಂಟೆವರೆಗೆ ಎಸ್.ಎಸ್.ಲೇಔಟ್ ಎ ಬ್ಲಾಕ್, ಅಥಣಿ ಕಾಲೇಜು, ಎಂಬಿಎ ಕಾಲೇಜು, ಇಂಡೋರ್‌ಸ್ಟೇಡಿಯಂ ಹಾಗೂ ಸುತ್ತಮುತ್ತಲ ಪ್ರದೇಶ ಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

ಆರೋಗ್ಯ ಕಾರ್ಯಾಗಾರ

ದಾವಣಗೆರೆ: ಬಾಪೂಜಿ ಮಕ್ಕಳ ಆರೋಗ್ಯ ಸಂಸ್ಥೆ ಮತ್ತು ಸಂಶೋಧನಾ ಕೇಂದ್ರದಿಂದ ಮೇ 7ರಂದು ರಂದು ವಿವೇಕ್ ಪೋಷಕರ ಆರೋಗ್ಯ ಕಾರ್ಯಾಗಾರದಡಿ 'ಅಭಿವೃದ್ಧಿ ವಿಳಂಬ ಹೊಂದಿರುವ ಶಿಶುಗಳಿಗಾಗಿ ಉತ್ತೇಜನ ತಂತ್ರಗಳು' ಎಂಬ ವಿಷಯ ಕುರಿತ ಉಪನ್ಯಾಸ ಕಾರ್ಯಕ್ರಮವನ್ನು ಇಲ್ಲಿನ ಬಾಪೂಜಿ ಮಕ್ಕಳ ಆರೋಗ್ಯ ಸಂಸ್ಥೆ ಮತ್ತು ಸಂಶೋಧನಾ ಕೇಂದ್ರದ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಮಧ್ಯಾಹ್ನ 3.30 ಗಂಟೆಗೆ ನಗರದ ಕಾಂಪೊಜಿಟ್ ರೀಜನಲ್ ಸೆಂಟರ್ ಉಪನ್ಯಾಸಕ, ಫಿಜಿಯೋಥೆರಪಿಸ್ಟ್ ಇ.ತಮರೈ ಸೆಲ್ವನ್ ಮಾಹಿತಿ ನೀಡುವರು ಎಂದು ಕೇಂದ್ರದ ನಿರ್ದೇಶಕರು ತಿಳಿಸಿದ್ದಾರೆ.

